MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 324 | ಬುಧವಾರ : 15-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 324 | WEDNESDAY : 15-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಿಎಂ ಸಿದ್ದರಾಮಯ್ಯ ಹಿಂದುಳಿದವರ ಚಾಂಪಿಯನ್ ಅಲ್ಲ : ಆರ್.ಅಶೋಕ್



**ಬೆಂಗಳೂರು,ಅ.14–** ಮುಖ್ಯಮಂತ್ರಿ ಸಿದ್ದರಾಮಯ್ಯ ದಲಿತರು, ಹಿಂದುಳಿದವರ ಚಾಂಪಿಯನ್ ಅಲ್ಲ. ಬದಲಿಗೆ ಅವರು ದಲಿತರು, ಹಿಂದುಳಿದವರಿಗೆ ಮೋಸ ಮಾಡಿದವರು ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಸರ್ಕಾರದ ವಿರುದ್ಧ ಸಾಲು ಸಾಲು ಪೋಸ್ ಮಾಡಿರುವ ಅವರು, ಗುಲ್ಬರ್ಗದಿಂದ ದಸರಾ ವೇಳೆ ಬಲೂನ್ ವ್ಯಾಪಾರಕ್ಕಾಗಿ ಮೈಸೂರಿಗೆ ಬಂದಿದ್ದ ಹಕ್ಕಿಪಿಕ್ಕಿ ಜನಾಂಗದ 10 ವರ್ಷದ ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಮಾಡಿ ಕೊನೆಗೆ ಕೊಲೆ ಮಾಡಿದ್ದ ಹೃದಯವಿದ್ರಾವಕ ಘಟನೆ ಇಡೀ ರಾಜ್ಯವನ್ನೆ ಬೆಚ್ಚಿ ಬೀಳಿಸಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಘಟನೆ ನಡೆದು 5 ದಿನಗಳಾದರೂ, ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಅಪ್ರಾಪ್ತ ಬಾಲಕಿಗೆ ಆದ ಈ ಅನ್ಯಾಯಕ್ಕೆ ಸಿಎಂ ಸಿದ್ದರಾಮಯ್ಯನವರ ಸರ್ಕಾರ ಈವರೆಗೂ ಪರಿಹಾರವನ್ನೂ ನೀಡಿಲ್ಲ, ಕನಿಷ್ಠ ಪಕ್ಷ ಸೌಜನ್ಯಕ್ಕೂ ಅವರ ಆ ಹೆತ್ತ ತಂದೆತಾಯಿಯರನ್ನು ಭೇಟಿಯಾಗಿ ಸಾಂತ್ವನವನ್ನೂ ಹೇಳಿಲ್ಲ ಎಂದು ಅಸಮಾಧಾನ ಹೊರ ಹಾಕಿದ್ದಾರೆ.

ಸ್ವಾಮಿ ಸಿಎಂ ಸಿದ್ದರಾಮಯ್ಯನವರೇ, ನಾವು ದಲಿತರು, ಹಿಂದುಳಿದವರ ಪರವಾಗಿದ್ದೇವೆ ಎಂದು ಬೊಗಳೆ ಭಾಷಣ ಮಾಡುತ್ತಿರಲ್ಲ, ನಿಮ್ಮ ತವರು ಜಿಲ್ಲೆಯಲ್ಲಿ ಮೈಸೂರಿನ ಹೃದಯ ಭಾಗದಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಬಾಲಕಿಗೆ ಆದ ಘೋರ ಅನ್ಯಾಯ ನಿಮ್ಮ ಕಣ್ಣಿಗೆ ಕಾಣುತ್ತಿಲ್ಲವೇ? ಎಂದು ಪ್ರಶ್ನೆ ಮಾಡಿದ್ದಾರೆ.

ಒಂದು ಕಡೆ ಮೈಸೂರು ಜಿಲ್ಲೆಯನ್ನು ಸಂಪೂರ್ಣವಾಗಿ ನಿಮ್ಮ ಪುತ್ರನಿಗೆ ಬಿಟ್ಟುಕೊಟ್ಟು ವರ್ಗಾವಣೆ, ಕಮಿಷನ್ ದಂಧೆಯಲ್ಲಿ ತೊಡಗಿಸಿದ್ದೀರಿ. ಇನ್ನೊಂದು ಕಡೆ ತಾವು ಬೆಂಗಳೂರಿನಲ್ಲಿ ಡಿನ್ನರ್ ಮೀಟಿಂಗ್, ಕಲೆಕ್ಷನ್ ಟಾರ್ಗೆಟ್ ಮೀಟಿಂಗ್ ಎಂದು ಬಿಹಾರ ಚುನಾವಣೆಗೆ ಫಂಡಿಂಗ್ ಕಳುಹಿಸಲು ಪೈಪೋಟಿಗೆ ಬಿದ್ದಂತೆ ಸಚಿವರಿಗೆ ವಸೂಲಿ ಟಾರ್ಗೆಟ್ ನೀಡಿ ಅಕ್ಟೋಬರ್ ಕ್ರಾಂತಿಯ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಳ್ಳುವಲ್ಲಿ ಬ್ಯುಸಿ ಆಗಿದ್ದೀರಿ.

ಹೀಗಾದರೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿಯದೇ ಇನ್ನೇನಾಗುತ್ತದೆ ಸ್ವಾಮಿ ಒಬ್ಬ ದಲಿತ ಬಾಲಕಿಯ ಕೊಲೆಯ ರಕ್ತ ನಿಮ್ಮ ಕೈಗಂಟಿದೆ. ಈ ಪಾಪದ ಶಾಪ ನಿಮ್ಮನ್ನು ತಟ್ಟದೇ ಇರದು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವೇತನ ಸಿಗದೆ ಕಲಬುರಗಿಯ ಗ್ರಂಥ ಪಾಲಕಿ ಆತ್ಮಹತ್ಯೆ, ಬಿಲ್ ಪಾವತಿ ಆಗದಿದ್ದಕ್ಕೆ ಕಂಟ್ರಾಕ್ಟರ್‌ಗಳ ಆತ್ಮಹತ್ಯೆ, ವರ್ಗಾವಣೆ, ಕಮಿಷನ್ ದಂಧೆಗೆ ಪೊಲೀಸರು, ಸರ್ಕಾರಿ ಅಕಾರಿಗಳ ಆತ್ಮಹತ್ಯೆ, ಸಕಾಲಕ್ಕೆ ನೆರೆ, ಬರ ಪರಿಹಾರ ಸಿಗದೆ ರೈತರ ಆತ್ಮಹತ್ಯೆ, ನಿಗಮ **(2ನೇ ಪುಟಕ್ಕೆ)**

## ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ಅಕ್ಟೋಬರ್ 16ರಂದು ರಾಯಚೂರು ಜಿಲ್ಲೆಗೆ ಭೇಟಿ



**ರಾಯಚೂರು,ಅ.14–** ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಅಕ್ಟೋಬರ್ 16ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮಕ್ಕೆ ಭೇಟಿ ನೀಡಿ, ಕೃಷಿ ಸಂಸ್ಕರಣೆ, ರೈತರ ತರಬೇತಿ ಕೇಂದ್ರ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿ ಯಾಗುವರು. ಮಧ್ಯಾಹ್ನ 12 ಗಂಟೆಗೆ ಜವಳಗೇರಾ ದಿಂದ ನಿರ್ಗಮಿಸಿ 12.20ಕ್ಕೆ ಸಿಂಧನೂರ ನಗರದ ನಿರೀಕ್ಷಣಾ ಮಂದಿರಕ್ಕೆ ತೆರಳುವರು. ಅಲ್ಲಿಂದ ಮಧ್ಯಾಹ್ನ 1 ಗಂಟೆಗೆ ನಿರ್ಗಮಿಸಿ ಬಳ್ಳಾರಿ ಜಿಲ್ಲೆಯತ್ತ ಪ್ರಯಾಣ ಬೆಳೆಸಲಿದ್ದಾರೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರ ಹೆಚ್ಚುವರಿ ಖಾಸಗಿ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಳ ಸಮುದಾಯದ ಕಲಾಣಕ್ಕೆ ಶೇ.100ರಷ್ಟು ಅನುದಾನ ಖರ್ಚು ಅತ್ಯಗತ್ಯ:ರಾಯಪ್ಪ ಹುಣಸಗಿ



**ಕಲಬುರಗಿ,ಅ.14–** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರವು ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ರಾಜ್ಯ ಮತ್ತು ಜಿಲ್ಲಾ ವಲಯದಡಿ ಬಿಡುಗಡೆ ಮಾಡಿದ ಅನುದಾನವನ್ನು ಶೇ.100ರಷ್ಟು ಖರ್ಚು ಮಾಡುವುದು ಅತ್ಯಗತ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ಸೋಮವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅನುಸೂಚಿತ ಜಾತಿ ಉಪ ಯೋಜನೆ ಮತ್ತು ಅನುಸೂಚಿತ ಪಂಗಡ ಉಪ ಯೋಜನೆ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಎರಡನೇ ತ್ರೈಮಾಸಿಕ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಯಾ ಇಲಾಖೆಗೆ ಬಿಡುಗಡೆಯಾದ ಅನುದಾನ ಕಾಲಮಿತಿಯಲ್ಲಿಲ್ಲಿಯೇ ಖರ್ಚು ಮಾಡಿ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗಂಗಾ ಕಲ್ಯಾಣ ಯೋಜನೆ ಅನುಷ್ಠಾನಕ್ಕೆ ವಿವಿಧ ನಿಗಮಗಳಿಂದ ಫಲಾನುಭವಿಗಳ ಹೆಸರು ಅನುಮೋದನೆಗೊಂಡ ಪ್ರಕರಣಗಳಲ್ಲಿ ವಿಳಂಬ ಮಾಡದೆ ಜೆಸ್ಕಾಂ ಅಧಿಕಾರಿಗಳು ವಿದ್ಯುತ್ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಸಿವಿಲ್ ಕಾಮಗಾರಿಗಳ ಪ್ರಕರಣಗಳಲ್ಲಿ ಕೂಡಲೆ ಟೆಂಡರ್ ಕರೆದು ಅಂತಿಮಗೊಳಿಸಿ ಕೆಲಸ ಆರಂಭಿಸಬೇಕು. ಶಿಕ್ಷಣ ಇಲಾಖೆಯಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸದಿರುವುದನ್ನು ಗಮನಿಸಿದ ಅವರು, ಕೂಡಲೆ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆದು ಕಾರ್ಯೋನ್ಮುಖರಾಗಬೇಕೆಂದರು.

ಜಿಲ್ಲೆಯಾದ್ಯಂತ ನಗರ ಸಂಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಪಿ.ಡಿ. ಡಿ.ಯು.ಡಿ.ಸಿ. ಅವರಿಗೆ ನಿರ್ದೇಶನ ನೀಡಿದ ಅಪರ ಜಿಲ್ಲಾಧಿಕಾರಿಗಳು, ವೈಯಕ್ತಿ ಸೌಲಭ್ಯ ಯೋಜನೆಗಳಡಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕೆಂದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ ಅವರು, ಇಲಾಖಾವಾರು ಪ್ರಗತಿ ಮಾಹಿತಿ ತಿಳಿಸಿದಲ್ಲದೆ ಪ್ರಸಕ್ತ 2025-26ನೇ ಸಾಲಿಗೆ ಇದೂವರೆಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿ ಒಟ್ಟಾರೆ ಜಿಲ್ಲೆಗೆ 172.21 ಕೋಟಿ ರೂ. ಹಂಚಿಕೆಯಾಗಿ 115.40 ಕೋಟಿ ರೂ. ಬಿಡುಗಡೆಯಾಗಿದ್ದು, ಇದರಲ್ಲಿ 100.91 ಕೋಟಿ ರೂ. ಖರ್ಚು ಮಾಡಲಾಗಿದೆ ಎಂದು ಅಂಕಿ-ಸಂಖ್ಯೆಗಳೊಂದಿಗೆ ವಿವಿಧ ಇಲಾಖೆಯ ಪ್ರಗತಿ ಸಭೆ ಮುಂದಿಟ್ಟರು.**(2ನೇಪುಟಕ್ಕೆ..)**

## ಸಮೀಕ್ಷೆಯ ಯಶಸ್ಸಿನಲ್ಲಿ ವಿದ್ಯಾರ್ಥಿ ಮತ್ತು ಸಿಬ್ಬಂದಿಯ ಪಾತ್ರವೂ ಮುಖ್ಯವಾಗಿದೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.14–**ತಾಲೂಕಿನ ತಹಶೀಲ್ದಾರ್ ಭೀಮರಾಯ ರಾಮಸಮುದ್ರ ಅವರು ಮಂಗಳವಾರ ಪಟ್ಟಣದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಭೇಟಿ ನೀಡಿ, ಮಹತ್ವದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಕುರಿತು ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗೆ ಜಾಗೃತಿ ಮೂಡಿಸಿದರು.

ಸಮೀಕ್ಷೆಯ ಮಹತ್ವವನ್ನು ವಿವರಿಸಿದ ತಹಶೀಲ್ದಾರ್ ಅವರು, ಇಂತಹ ಸಮೀಕ್ಷೆಗಳು ಸರ್ಕಾರದ ಯೋಜನೆಗಳು ಮತ್ತು ಕಲ್ಯಾಣ ಕಾರ್ಯಕ್ರಮಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ರೂಪಿಸಲು ಅತ್ಯಗತ್ಯ ಎಂದು ತಿಳಿಸಿದರು.

ಮುಂದುವರೆದು ಮಾತನಾಡಿ,"ಸಮಗ್ರ ಮಾಹಿತಿಯನ್ನು ಒದಗಿಸುವ ಮೂಲಕ ಸಮೀಕ್ಷೆಯ ಯಶಸ್ಸಿನಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿ ಮತ್ತು ಸಿಬ್ಬಂದಿಯ ಪಾತ್ರವೂ ಮುಖ್ಯವಾಗಿದೆ. ಪ್ರತಿಯೊಬ್ಬರೂ ಕಡ್ಡಾಯವಾಗಿ ಮತ್ತು ನಿಖರವಾಗಿ ಸಮೀಕ್ಷೆಯನ್ನು ಪೂರ್ಣಗೊಳಿಸಬೇಕು" ಎಂದು ಸೂಚಿಸಿದರು.

ಸಮೀಕ್ಷೆಯ ಮಹತ್ವ ಮತ್ತು ಅದರ ಪ್ರಯೋಜನಗಳ ಕುರಿತು ವಿದ್ಯಾರ್ಥಿಗಳಿಗೆ ಸಂಪೂರ್ಣ ಅರಿವು ಮೂಡಿಸಲಾಯಿತು. ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಈ ಜವಾಬ್ದಾರಿಯನ್ನು ನಿರ್ವಹಿಸುವಂತೆ ತಹಶೀಲ್ದಾರ್ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ. ಚನ್ನಬಸವ. ಮಾಡಗಿರಿ, ಡಾ.ಸಯ್ಯದ್ ಮುಜಿಬ್ ಅಹಮದ್, ಶಶಿಧರ್, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಹಾಲೇಶ್, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ದೇಶಪಾಂಡೆ ಸರ್ಕಾರದ ವಾಸ್ತವಾಂಶವನ್ನು ತೆರೆದಿಟ್ಟಿದ್ದಾರೆ : ನಿಖಿಲ್ ಕುಮಾರಸ್ವಾಮಿ



**ಬೆಂಗಳೂರು, ಅ.14–** ರಾಜ್ಯದಲ್ಲಿ ಗ್ಯಾರಂಟಿಯಿಂದ ಅಭಿವೃದ್ಧಿ ಕುಂಠಿತವಾಗಿದೆ ಎಂಬ ವಾಸ್ತವಾಂಶವನ್ನು ಕಾಂಗ್ರೆಸ್ ಹಿರಿಯ ಶಾಸಕರಾದ ಆರ್.ವಿ. ದೇಶಪಾಂಡೆ ತೆರೆದಿಟ್ಟಿರುವುದರಲ್ಲಿ ತಪ್ಪೆನಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶಪಾಂಡೆ ಅವರು ಗ್ಯಾರಂಟಿಗಳ ಬಗ್ಗೆ ಅಪಸ್ವರ ಎತ್ತಿದ್ದಾರೆ. ಸರ್ಕಾರದ ವಾಸ್ತವ ಅಂಶವನ್ನು ತೆರೆದಿಟ್ಟಿದ್ದಾರೆ ಎಂದು ಹೇಳಿದರು.

ರಾಜ್ಯದ ಮುಖ್ಯಮಂತ್ರಿ ದೊಡ್ಡ ಗಾತ್ರದ ಬಜೆಟ್ ಕೊಟ್ಟಿದ್ದು, ಗ್ಯಾರಂಟಿಗಳಿಗೆ 60 ಸಾವಿರ ಕೋಟಿ ಮಿಸಲಿಟ್ಟಿರುವುದಾಗಿ ಹೇಳಿದರೂ ಇಲ್ಲಿವರೆಗೂ ಪ್ರತಿ ತಿಂಗಳು **(2ನೇಪುಟಕ್ಕೆ)**

## ಶಾಸಕರಿಂದ ಸಿರವಾರದಲ್ಲಿ ವಾಲ್ಮೀಕಿ ಭವನ ನಿರ್ಮಾಣ ಸ್ಥಳ ವೀಕ್ಷಣೆ: 2 ಕೋಟಿ ರೂ. ವೆಚ್ಚದ ಪ್ರಸ್ತಾವನೆ ಸಲ್ಲಿಕೆ

**ಯುವ ಮಾರ್ಗ ಸುದ್ದಿ**




**ಸಿರವಾರ,ಅ.14–** ಮಾನ್ವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸಿರವಾರ ಪಟ್ಟಣದಲ್ಲಿ ಸುಮಾರು 2 ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವ ಮಹರ್ಷಿ ವಾಲ್ಮೀಕಿ ಸಮುದಾಯ ಭವನದ ಸ್ಥಳವನ್ನು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಹಂಪಯ್ಯ ನಾಯಕ್ ಸಾಹುಕಾರ್ ಅವರು ಮಂಗಳವಾರ ವೀಕ್ಷಣೆ ಮಾಡಿದರು.

ವಾಲ್ಮೀಕಿ ಭವನ ನಿರ್ಮಾಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳಿಸಲಾಗಿದ್ದು, ಹಿಂದಿನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಇದ್ದ ಸಂದರ್ಭದಲ್ಲಿ 25 ಲಕ್ಷ ರೂಪಾಯಿಗಳು ಮಂಜೂರಾಗಿವೆ. ಇನ್ನುಳಿದ ಹಣವನ್ನು ನಿಗಮದಿಂದ ಮಂಜೂರು ಮಾಡಿಸಿ ಆದಷ್ಟು ಬೇಗನೆ ಕಾಮಗಾರಿಗೆ ಚಾಲನೆ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕರು ತಿಳಿಸಿದರು. ಅಲ್ಲದೆ, ತಕ್ಷಣವೇ ಕೆಲಸ ಪ್ರಾರಂಭಿಸಲು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಸಿರವಾರ್ ತಾಲ್ಲೂಕು ಪಂಚಾಯಿತಿ ಗ್ಯಾರಂಟಿ ಅಧ್ಯಕ್ಷರಾದ ಬ್ರಿಜೇಶ್ ಪಾಟೀಲ್, ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಭೂಪನಗೌಡ, ಶಿವಕುಮಾರ್ ಅರಕೆರ, ಪ್ರವೀಣ್ ಕುಮಾರ್, ಸೂರಿ ದುರ್ಗಣ್ಣ, ರಂಗನಾಥ್ ನಾಯಕ್, ಬಸವರಾಜ್ ಕಲ್ಲೂರ್, ತಾಲ್ಲೂಕು ದಂಡಾಧಿಕಾರಿಗಳಾದ ಅಶೋಕ್ ಪವಾರ್, ಜಿಲ್ಲಾ ಪರಿಶಿಷ್ಟ ಪಂಗಡ ಕಲ್ಯಾಣ ಅಧಿಕಾರಿಗಳಾದ ಶಿವಮಾನಪ್ಪ, ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳಾದ ಸುರೇಶ್, ಲೋಕೋಪಯೋಗಿ ಇಲಾಖೆಯ ಜೆಇ ಶಾಮಲಪ್ಪ, ಪರಿಶಿಷ್ಟ ಪಂಗಡ ಕಲ್ಯಾಣ ಅಭಿವೃದ್ಧಿ ಅಧಿಕಾರಿಗಳಾದ ಮಹದೇವಪ್ಪ ಇಂಗದಾಳ, ಸೇರಿದಂತೆ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

## ಕಾರ್ಮಿಕ ಸಚಿವ ಸಂತೋಷ್ ಲಾಡ್ ರಾಯಚೂರಿಗೆ: ಕಾರ್ಮಿಕರಿಗೆ ಸಾರಿಗೆ ವ್ಯವಸ್ಥೆ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಅ.14–** ರಾಜ್ಯ ಕಾರ್ಮಿಕ ಸಚಿವರಾದ ಸಂತೋಷ್ ಲಾಡ್ ಅವರು ಇಂದು ರಾಯಚೂರು ಜಿಲ್ಲೆಗೆ ಆಗಮಿಸಲಿ ದ್ದು, ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ರಾಯಚೂರಿನ ಗಂಜ್ ಕಲ್ಯಾಣ ಮಂಟಪದಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಟೈಲರ್‌ಗಳು, ಆಟೋ ಚಾಲಕರು, ಲಾರಿ ಚಾಲಕರು, ಅಮಾಲಿಗಳು, ಮನೆ ಕೆಲಸದವರು, ಕಟ್ಟಡ ಕಾರ್ಮಿಕರು ಮತ್ತು ಹೋಟೆಲ್ ಕಾರ್ಮಿಕರು ಸೇರಿದಂತೆ ಎಲ್ಲ ಕಾರ್ಮಿಕ ಬಂಧುಗಳು ಭಾಗವಹಿಸಬೇಕೆಂದು ಸಂಘಟಕರು ಮನವಿ ಮಾಡಿದ್ದಾರೆ.

ಕಾರ್ಯಕ್ರಮಕ್ಕೆ ಆಗಮಿಸುವ ಕಾರ್ಮಿಕರ ಅನುಕೂಲಕ್ಕಾಗಿ ರಾಯಚೂರು ಜಿಲ್ಲೆಯ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಂದ ಬಸ್ಸು ಮತ್ತು ಕ್ರೂಸರ್ ವಾಹನಗಳ ವ್ಯವಸ್ಥೆಯನ್ನು ಮಾಡಲಾಗಿದೆ. ರಾಯ ಚೂರು ಜಿಲ್ಲೆ ಮತ್ತು ಸುತ್ತಮುತ್ತಲಿನ ಹಳ್ಳಿಗಳ ಕಾರ್ಮಿಕರಿಗಾಗಿ ಒಟ್ಟು 20 ಕ್ರೂಸರ್ ವಾಹನಗಳನ್ನು ನಿಯೋಜಿಸಲಾಗಿದೆ.

ಲಿಂಗಸುಗೂರು ತಾಲ್ಲೂಕಿನಿಂದ ಒಟ್ಟು 3 ಬಸ್ಸುಗಳು ಇರಲಿದ್ದು, ಇದರಲ್ಲಿ ಮುದಗಲ್‌ನಿಂದ ಎರಡು ಬಸ್ಸುಗಳು ಜೂನಿಯರ್ ಕಾಲೇಜ್ ಲಿಂಗಸುಗೂರು ಸ್ಥಳದಿಂದ ಹೊರಡಲಿವೆ. ಮಸ್ಕಿ ತಾಲ್ಲೂಕಿನಿಂದ 3 ಬಸ್ಸುಗಳು, ಸಿಂಧನೂರು ತಾಲ್ಲೂಕಿನಿಂದ 4 ಬಸ್ಸುಗಳು ಎಪಿಎಂಸಿ ಕಾರ್ಮಿಕರ ನಿರೀಕ್ಷಕರ ಕಚೇರಿಯಿಂದ, ಮತ್ತು ಮಾನ್ವಿ ತಾಲ್ಲೂಕಿನಿಂದ 3 ಬಸ್ಸುಗಳು ಕರಡಿಗುಡ್ಡ ಸರ್ಕಲ್‌ನಲ್ಲಿರುವ ಕಾರ್ಮಿಕರ ನಿರೀಕ್ಷಕರ ಕಚೇರಿಯಿಂದ ಹೊರಡಲಿವೆ. ಹಾಗೆಯೇ, ಸಿರವಾರ ತಾಲ್ಲೂಕಿನಿಂದ 3 ಬಸ್ಸುಗಳು ಕಾರ್ಮಿಕರ ನಿರೀಕ್ಷಕರ ಕಚೇರಿ ಸ್ಥಳದಿಂದ, ಹಾಗೂ ದೇವದುರ್ಗ ತಾಲ್ಲೂಕಿನಿಂದ 3 ಬಸ್ಸುಗಳು ಎಪಿಎಂಸಿ ಗೇಟ್‌ನಲ್ಲಿರುವ ಕಾರ್ಮಿಕರ ನಿರೀಕ್ಷಕರ ಕಚೇರಿಯಿಂದ ಹೊರಡಲಿವೆ.

ಎಲ್ಲ ಕಾರ್ಮಿಕ ಬಂಧುಗಳು ತಮ್ಮ ಪ್ರಯಾಣದ ಸಮಯವನ್ನು ಸ್ಥಳೀಯ ಕಾರ್ಮಿಕರ ಕಚೇರಿಯಿಂದ ಅಥವಾ ಸಂಘದ ಕಚೇರಿಯಿಂದ ತಿಳಿದುಕೊಳ್ಳಬೇಕೆಂದು ಸಂಕಲ್ಪ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕರ ಸಂಘದ ಕಲ್ಬುರ್ಗಿ ವಿಭಾಗದ ಅಧ್ಯಕ್ಷರಾದ ಪರಶುರಾಮ್ ಬಾಗಲವಾಡ ಅವರು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

# ದೀಪಾವಳಿ ಹಬ್ಬಕ್ಕೆ ಕೆ.ಎಸ್.ಆರ್.ಟಿ.ಸಿ ಯಿಂದ 2500 ವಿಶೇಷ ಬಸ್ ಸೇವೆ

**ಬೆಂಗಳೂರು,ಅ.14–**ದೀಪಾವಳಿ ಹಬ್ಬದ ಪ್ರಯುಕ್ತ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಬೆಂಗಳೂರಿನಿಂದ ರಾಜ್ಯ ಹಾಗೂ ಅಂತರರಾಜ್ಯಕ್ಕೆ 2500 ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಕಲ್ಪಿಸಿದೆ.ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿ ನಗರ ನಿಲ್ದಾಣದಿಂದ ಅ.17 ರಿಂದ 20 ರ ವರೆಗೆ ಬಸ್‌ಗಳು ಹೊರಡಲಿವೆ.

ಹಾಗೂ ರಾಜ್ಯ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಅ.22 ರಿಂದ 26 ರ ವರೆಗೆ ಬೆಂಗಳೂರಿಗೆ ವಿಶೇಷ ಬಸ್‌ಗಳು ಬರಲಿವೆ.ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲ್ಬುರ್ಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬದ್ ಮುಂತಾದ ರಸ್ತೆಗಳಿಗೆ ವಿಶೇಷಕ ಕಾರ್ಯಾಚರಣೆ ಮಾಡಲಿವೆ.

ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲ ನಗರ, ಮಡಿಕೇರಿ ಮಾರ್ಗದ ಕಡೆ ಬಸ್?ಗಳು ತೆರಳಲಿವೆ.ತಮಿಳುನಾಡು, ಕೇರಳ, ಮಧುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರು, ತಿರುಚಿ, ಪಾಲಕ್ಕಾಡ್, ತ್ರಿಶೂರ್, ಏರ್ನಾಕುಲಂ, ಕೋಯಿಕೋಡ್,ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ತೆರಳುವ ಪ್ರತಿಷ್ಠಿತ ಸಾರಿಗೆ ಬಸ್‌ಗಳು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಿವೆ. ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಹಾಸನಗಳನ್ನು ಕಾಯ್ದಿರಿಸುವ ಸೌಲಭ್ಯ



ಕಲ್ಪಿಸಲಾಗಿದೆ. www.ksrtc karnataka.gov.in ವೆಬ್‌ಸೈಟ್ ಮುಖಾಂತರ ಈ ಟಿಕೆಟ್ ಬುಕ್ಕಿಂಗ್ ಮಾಡಬಹುದಾಗಿದೆ. ಪ್ರಯಾಣಿಕರು ಕರ್ನಾಟಕ ಹಾಗೂ ಅಂತರರಾಜ್ಯದಲ್ಲಿರುವ ಬುಕ್ಕಿಂಗ್ ಕೌಂಟರ್‌ಗಳ ಮೂಲಕವು ಕೂಡ ಮುಂಗಡವಾಗಿ ಹಾಸನಗಳನ್ನು ಕಾಯ್ದಿರಿ ಸಬಹುದಾಗಿದೆ.


ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್ ಕಾಯ್ದಿರಿಸಿದ್ದಲ್ಲಿ ಶೇ. 5 ರಷ್ಟು ರಿಯಾಯಿತಿ ನೀಡಲಾಗುವುದು. ಹೋಗುವ ಮತ್ತು ಬರುವ ಪ್ರಯಾಣದ ಟಿಕೆಟ್‌ಗಳನ್ನು ಒಟ್ಟಿಗೆ ಕಾಯ್ದಿರಿಸಿದರೆ ವಾಪಸ್ ಪ್ರಯಾಣ ದರದಲ್ಲಿ ಶೇ. 10 ರಷ್ಟು ರಿಯಾಯಿತಿ ನೀಡಲಾಗುವುದು.

ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ , ಮಹಾರಾಷ್ಟ್ರ ಹಾಗೂ ಪುದುಚೆರಿಯಲ್ಲಿರುವ ಪ್ರಮುಖ ನಗರಗಳಲ್ಲಿ ನಿಗಮದ ಕಚೇರಿಯಲ್ಲಿ ಮುಂಗಡ ಹಾಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳಿದ್ದು ಇವುಗಳ ಮೂಲಕವು ಸಹ ಮುಂಗಡವಾಗಿ ಹಾಸನಗಳನ್ನು ಕಾಯ್ದಿರಿಸಬಹುದಾಗಿದೆ.ವಿಶೇಷ ಬಸ್‌ಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ವೆಬ್‌ಸೈಟ್‌ಗಳಲ್ಲಿ ಒದಗಿಸಲಾಗಿದೆ ಎಂದು ನಿಗಮವು ತಿಳಿಸಿದೆ.

## ಕಾರ್ಕಳ ಮಾಜಿ ಶಾಸಕ ಗೋಪಾಲ ಭಂಡಾರಿಯವರ ಪುತ್ರ ಸುದೀಪ್ ಭಂಡಾರಿ ಆತ್ಮಹತ್ಯೆ

**ಉಡುಪಿ,ಅ.14–**ಕಾರ್ಕಳದ ಮಾಜಿ ಶಾಸಕ ದಿ. ಗೋಪಾಲ ಭಂಡಾರಿಯವರ ಪುತ್ರ ಸುದೀಪ್ ಭಂಡಾರಿ (48) ಆತ್ಮಹತ್ಯೆ ಶರಣಾಗಿದ್ದಾರೆ. ಸುದೀಪ್ ಭಂಡಾರಿ ಕಳೆದ ರಾತ್ರಿ ಬ್ರಹಾವರ ಸಮೀಪದ ಬಾರ್ಕೂರು ಬಳಿ ರೈಲಿಗೆ ಸಿಕ್ಕಿ ಆತ್ಮಹತ್ಯೆಗೆ ಮಾಡಿಕೊಂಡಿದ್ದಾರೆ. ಹೆಬ್ರಿಯಲ್ಲಿ ವೈನ್ ಶಾಪ್ ಹೊಂದಿದ್ದ ಮೃತ ಸುದೀಪ್ ಭಂಡಾರಿ ಅತ್ಯಂತ ಸರಳ ವ್ಯಕ್ತಿತ್ವದವರಾಗಿದ್ದರು ಎನ್ನಲಾಗಿದೆ.

ಮೃತರು ತಾಯಿ, ಪತ್ನಿ, ಇಬ್ಬರು ಮಕ್ಕಳು, ಒಬ್ಬ ಸಹೋದರ ಮತ್ತು ಒಬ್ಬ ಸಹೋದರಿಯನ್ನು ಅಗಲಿದ್ದಾರೆ. ಬ್ರಹ್ಮಾವರ ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಸಾವಿನ ಸುತ್ತಲಿನ ಸಂದರ್ಭಗಳ ಬಗ್ಗೆ ಸಮಗ್ರ ತನಿಖೆಯನ್ನು ಪ್ರಾರಂಭಿಸಿದ್ದಾರೆ.



ಆದರೆ ಸುದೀಪ್ ಈ ರೀತಿ ಆತ್ಮಹತ್ಯೆ ಮಾಡಿಕೊಳ್ಳಲು ನಿಖರ ಕಾರಣ ತಿಳಿದು ಬಂದಿಲ್ಲ. ಆರ್ಥಿಕ ಮುಗ್ಗಟ್ಟಿನಿಂದ ಆತಹತ್ಯೆ ಮಾಡಿಕೊಂಡಿರುವ ಸಾಧ್ಯತೆ ಇದೆ ಎನ್ನಲಾಗಿದೆ. ಈ ಸಂಬಂಧ ಬ್ರಹ್ಮಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಡಾ.ಎಸ್.ಎಲ್.ಭೈರಪ್ಪರಿಗೆ ನುಡಿ ನಮನ ಸಲ್ಲಿಕೆ

**ಕೆ.ಆರ್.ಪೇಟೆ.ಅ.14–** ಪಟ್ಟಣದ ಬ್ರಾಹ್ಮಣರ ರಾಮಮಂದಿರದಲ್ಲಿ ಕಾದಂಬರಿಕಾರ ಡಾ.ಎಸ್. ಎಲ್.ಭೈರಪ್ಪರಿಗೆ ನುಡಿನಮನ ಸಲ್ಲಿಸಲಾಯಿತು.

ಸಾಹಿತಿ ಎಂ.ಎಸ್.ಸೋಮಶೇಖರ್ ಮಾತನಾಡಿ, ಎಸ್. ಎಲ್.ಭೈರಪ್ಪ ವಿರಚಿತ ಕಾದಂಬರಿಗಳು ವ್ಯಕ್ತಿಯ ಮಾನಸಿಕ ಸಂದಿಗ್ಧತೆ ಮತ್ತು ಭಾರತೀಯ ಪರಂಪರೆಯ ಮೆರುಗನ್ನು ಅನಾವರಣ ಮಾಡಿದ್ದು, ಮನೆ–ಮನ ಮುಟ್ಟಿವೆ ಎಂದರು. ಭೈರಪ್ಪ ಅವರು 25 ಕ್ಕೂ ಅಧಿಕ ಕಾದಂಬರಿ ಮತ್ತು ಸಾಹಿತ್ಯ ಕೃತಿಗಳನ್ನು ಬರೆದಿದ್ದಾರೆ. ಅವರ ಕಾದಂಬರಿ ಓದಿದಾಗ ಅದು ಕೃತಕ ಎನ್ನಿಸುವುದಿಲ್ಲ. ಇಲ್ಲೆಲ್ಲೋ ನಮ್ಮ ನಡುವೆಯೇ ನಡೆ ದಿರುವಂತೆ, ನಮ್ಮ ಮನ ಸ್ಸಿನೊಳಗೆ ಘಟನೆಗಳು ತಾಕಲಾಟ ನಡೆಸಿದಂತೆ ಭಾಸವಾಗುತ್ತದೆ. ಅವರ ಪ್ರತಿ ಕಾದಂಬರಿ ರಚನೆಯಲ್ಲಿಯೂ ಸಂಶೋಧನೆ ನಡೆಸಿ ಚರ್ಚಿಸಿ ಬರೆಯುತಿದ್ದರು ಎಂದರು.



ಜಿಲ್ಲಾ ಬ್ರಾಹ್ಮಣಸಭಾ ನಿರ್ದೇಶಕ ಶಂಕರನಾರಾಯಣ ಶಾಸ್ತ್ರಿ, ತಾಲೂಕು ಅಧ್ಯಕ್ಷ ಅರವಿಂದಕಾರಂತ್ ಮಾತನಾಡಿದರು.ಲೇಖಕ ಬಲ್ಲೇನಹಳ್ಳಿ ಮಂಜುನಾಥ್ ಭೈರಪ್ಪ ಬದುಕು ಬರಹದ ಬಗ್ಗೆ ಪರಿಚಯ ಮಾಡಿಕೊಟ್ಟರು.

ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ರಘುರಾಮ್ ನಾಡಿಗ್, ಕಾರ್ಯದರ್ಶಿ ಕುಪ್ಪಳ್ಳಿಸುಬ್ರಹ್ಮಣ್ಯ, ಸುಬ್ಬುನರಸಿಂಹ, ರಾಮಮಂದಿರದ ಅಧ್ಯಕ್ಷ ಜಿ.ಆರ್.ಅನಂತರಾಮಯ್ಯ ಸೇರಿದಂತೆ ಹಲವು ಗಣ್ಯರು, ಅಭಿಮಾನಿಗಳು ಭಾಗವಹಿಸಿದ್ದರು.

## ಪ್ರಿಯಾಂಕ್ ಖರ್ಗೆರಿಗೆ ಬಿ.ವೈ.ವಿಜಯೇಂದ್ರ ತಿರುಗೇಟು





**ಬೆಂಗಳೂರು,ಅ.14–**ಕಾಂಗ್ರೆಸ್ ಎಂಬ ಅಧಿಕಾರ ಸೃಷ್ಟಿಯ ಫ್ಯಾಕ್ಟರಿ ಹೊರತುಪಡಿಸಿದಂತೆ ನಿಮ್ಮ ಜೀವನದಲ್ಲಿ ಯಾವ ರಾಷ್ಟ್ರ ಭಕ್ತ ಸಂಘಟನೆಯಲ್ಲಿ ನೀವು ಸೇವೆ ಸಲ್ಲಿಸಿದ್ದೀರಿ, ಆಧಾರ ಸಹಿತ ಮಾಹಿತಿ ಕೊಡಿ ಎಂದು ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿರುಗೇಟು ನೀಡಿದ್ದಾರೆ.

ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಸಚಿವ ಪ್ರಿಯಾಂಕ ಖರ್ಗೆ ವಿರುದ್ಧ ತೀವ್ರ ವಾಗ್ದಳಿ ನಡೆಸಿರುವ ವಿಜಯೇಂದ್ರ, ಹಿಂದೂ ಸಂಘಟನೆಗಳನ್ನು ಹೊರತುಪಡಿಸಿ ನಿಮ್ಮ ರಾಜಕೀಯ ಜೀವನದಲ್ಲಿ ಇತರೆ ಕೋಮುವಾದಿ ಸಂಘಟನೆಗಳ ಬಗ್ಗೆ, ಭಯೋತ್ಪಾದಕತೆಯ ಕುರಿತು, ಮುಸ್ಲಿಂ ಮೂಲಭೂತವಾದಿ ಸಂಸ್ಥೆಗಳ ಕುಕೃತ್ಯಗಳ ಕುರಿತು ಎಂದಾದರೂ ಒಮ್ಮೆ ಯಾದರೂ ನೀವು ಟೀಕೆ– ಟಿಪ್ಪಣಿ ಮಾಡಿದ್ದೀರಾ ಎಂದು ಪ್ರಶ್ನಿಸಿದ್ದಾರೆ.

ಸಾಮಾಜಿಕ ಸಂಘಟನೆಗಳ ಹಿನ್ನೆಲೆ ಇಲ್ಲದೇ ಅಧಿಕಾರ ರಾಜಕಾರಣದ ನೆರಳಿನಲ್ಲಿ ಬಂದ ನಿಮಗೆ ರಾಷ್ಟ್ರಭಕ್ತ ಸಂಘಟನೆಗಳ ಸೇವೆ, ಇತಿಹಾಸ ತಿಳಿಯಲು ಹೇಗೆ ಸಾಧ್ಯ. ನಿಮ ಉದ್ದೇಶ ರಾಷ್ಟ್ರಿಯ ಸ್ವಯಂಸೇವಕ ಸಂಘವನ್ನು ಟೀಕಿಸುವುದಲ್ಲ, ಹಿಂದೂ ಧರ್ಮವನ್ನು ಅವಹೇಳನ ಮಾಡುವುದು. ಏಕೆಂದರೆ ನೀವು ಹಿಂದೂ ಧರ್ಮವನ್ನು ಮರೆತು ಬಹು ವರ್ಷಗಳೇ ಕಳೆದಿದೆ, ಈ ಕಾರಣಕ್ಕಾಗಿಯೇ ಹಿಂದೂ ಧರ್ಮದ ಕುರಿತು ನೀವು ಹಗೆತನ, ದ್ವೇಷ ಸಾಧಿಸುತ್ತಿದ್ದೀರಿ ಎಂದು ಕಿಡಿಕಾರಿದ್ದಾರೆ.

ಒಂದೊಮೆ ನಿಮ್ಮ ಕುಟುಂಬದ ಇತಿಹಾಸದತ್ತ ಮೆಲುಕುಹಾಕಿ, ರಜಾಕರ ದಾಳಿಯ ನಡುವೆ ನಿಮ ಪೂಜ್ಯ ತಂದೆಯವರು ಹೇಗೆ ಬದುಕುಳಿದರು ಎಂಬುದನ್ನು ಒಮೆ ಅವಲೋಕನ ಮಾಡಿ, ಆದಾಗ್ಯೂ ನೀವು ರಜಾಕರು ಹಾಗೂ ರಜಾಕ ಸಂಸ್ಕೃತಿಯನ್ನು ಒಮೆಯೂ ಟೀಕಿಸಲಿಲ್ಲ, ಬದಲಾಗಿ ಅದನ್ನು ಪೋಷಿಸುತ್ತಿರುವ ಕಾಂಗ್ರೆಸ್ ಪಕ್ಷದ ಅಧಿಕೃತ ವಕ್ತಾರರಾಗಿ ದೇಶವಿರೋಧಿ ಮನಸ್ಥಿತಿಯ ಸಂಘಟನೆಗಳ ಪ್ರತಿನಿಧಿ ಎಂಬಂತೆ ರಾಷ್ಟ್ರಭಕ್ತ ಸಂಘಟನೆ ಆರ್‌ಎಸ್‌ಎಸ್ ಅನ್ನು ಟೀಕಿಸಿ, ಅವಹೇಳನ ಮಾಡುವುದನ್ನು ರಾಜಕೀಯ ಅಧಿಕಾರ ಅನುಭವಿಸುವ ಏಕೈಕ ಉದ್ದೇಶಕ್ಕಾಗಿ ಜೀವನ ಧ್ಯೆಯ ಮಾಡಿಕೊಂಡಿದ್ದೀರಿ ಎಂದು ಕುಟುಕಿದ್ದಾರೆ. ಆರ್‌ಎಸ್‌ಎಸ್ ಹಾಗೂ ರಾಷ್ಟ್ರಭಕ್ತ ಸಂಘಟನೆಗಳ ವಿರುದ್ಧ ಡಂಗೂರ ಭಾರಿಸಿ ಬೊಬ್ಬೆ ಹೊಡೆಯುವ ಕೆಲಸವನ್ನು ನಿಷ್ಠೆಯಿಂದ ನಿರ್ವಹಿಸಿ ನಿಮ ಹೈಕಮಾಂಡ್ ಬೆನ್ನು ತಟ್ಟಿಸಿಕೊಳ್ಳುವ ಪೈಪೋಟಿಯಲ್ಲಿ ನಿರತರಾಗಿದ್ದೀರಿ ಎಂದು ತಿರುಗೇಟು ನೀಡಿದ್ದಾರೆ.

ಸರ್ಕಾರಿ ಶಾಲೆಗಳು, ಕಾಲೇಜುಗಳು, ದೇವಾಲಯಗಳು ಮತ್ತು ಇತರ ಆವರಣಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಷೇಧಿಸುವ ಪ್ರಸ್ತಾಪ ಮುಂದಿಟ್ಟಿರುವ ಪ್ರಿಯಾಂಕ್ ಖರ್ಗೆ ವಿರುದ್ಧ ರಾಜ್ಯ ಬಿಜೆಪಿ ತೀವ್ರ ವಾಗ್ದಾಳಿ ನಡೆಸುತ್ತಿದೆ.

## ಕಲ್ಯಾಣ ಕರ್ನಾಟಕಕ್ಕೆ ನಾಳೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ನಿರ್ಮಲಾ ಪ್ರವಾಸ

**ನವದೆಹಲಿ, ಅ.14–** ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಾಳೆಯಿಂದ ಎರಡು ದಿನ ಕಲ್ಯಾಣ ಕರ್ನಾಟಕ ಜಿಲ್ಲೆಗಳಿಗೆ ಪ್ರವಾಸ ಕೈಗೊಂಡಿದ್ದಾರೆ. ಕಲ್ಯಾಣ ಕರ್ನಾಟಕದ ಜಿಲ್ಲೆಗಳಾದ ಕಲಬುರಗಿ, ಬೀದರ್, ಕೊಪ್ಪಳ, ಬಳ್ಳಾರಿ, ರಾಯಚೂರು ಹಾಗೂ ಯಾದಗಿರಿಯಲ್ಲಿ ನಡೆಯಲಿರುವ ವಿವಿಧ ಕಾರ್ಯಕ್ರಮಗಳಲ್ಲಿ ನಿರ್ಮಲಾ ಸೀತಾರಾಮನ್ ಭಾಗಿಯಾಗಲಿದ್ದಾರೆ.

ತಮ ಈ ಪ್ರವಾಸದ ವೇಳೆ ರೈತ ಪ್ರಮುಖರು, ರೈತ ಕೇಂದ್ರಗಳು, ಕೃಷಿ ತರಬೇತಿ ಕೇಂದ್ರಗಳು, ಕೃಷಿ ಉತ್ಪನ್ನಗಳ ಸಂಸ್ಕರಣಾ ಕೇಂದ್ರಗಳಿಗೆ ಭೇಟಿ ನೀಡಿ, ಸಂವಾದ ನಡೆಸಲಿದ್ದಾರೆ. ಕೇಂದ್ರಕ್ಕೆ ಎನ್‌ಡಿಆರ್‌ಎಫ್ ನೆರೆ ಪರಿಹಾರ ಕೋರಿ ರಾಜ್ಯದಿಂದ ಪತ್ರ ಬರೆಯಲು ಸಿದ್ಧತೆ ಬೆನ್ನಲ್ಲೇ ವಿತ್ತ ಸಚಿವೆ ರಾಜ್ಯ ಭೇಟಿ



ಕೈಗೊಂಡಿದ್ದಾರೆ.

ಕಲ್ಯಾಣ ಕರ್ನಾಟಕದ ವಿವಿಧ ಜಿಲ್ಲೆಗಳಿಗೆ ನಾಳೆಯಿಂದ ಪ್ರವಾಸ ಕೈಗೊಳ್ಳುತ್ತಿದ್ದೇನೆ. ಅಲ್ಲಿ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಘಟಕಗಳನ್ನು ಸ್ಥಾಪಿಸಲಾಗಿದ್ದು, ಸದರಿ ರೈತರ ತರಬೇತಿ ಕೇಂದ್ರ ಮತ್ತು ಕಾಮನ್ ಫೆಸಿಲಿಟಿ ಸೆಂಟರ್‌ಗಳನ್ನು ಭೇಟಿಯಾಗಿ ಅವುಗಳ ಉತ್ಪಾದನಾ ಚಟುವಟಿಕೆಗಳನ್ನು ವೀಕ್ಷಿಸಲಿದ್ದೇನೆ. ನನ್ನ ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ನಿಧಿ ಬಳಸಿ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಲ್ಲಿ ತಲಾ ಒಂದು ಘಟಕವನ್ನು ಸ್ಥಾಪಿಸಲಾಗಿದೆ ಎಂದು ನಿರ್ಮಲಾ ಎಕ್ಸ್ ಮಾಡಿದ್ದಾರೆ.

ಈ ಪ್ರವಾಸದ ಸಮಯದಲ್ಲಿ ವಿಜಯನಗರ, ಬಳ್ಳಾರಿ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಘಟಕಗಳ ಉದ್ಘಾಟನೆ ಮಾಡಲಾಗುತ್ತದೆ. ಈ ಕೃಷಿ ಸಂಸ್ಕರಣೆ ಕೇಂದ್ರಗಳಿಂದ ತರಬೇತಿ ಪಡೆದ ರೈತರು ಮತ್ತು ಲಾಭ ಪಡೆಯುವ ರೈತರು ಹಾಗೂ ರೈತರ ಉತ್ಪಾದಕರ ಸಂಘಗಳು ಮತ್ತು ಅವರ ಕುಟುಂಬಗಳನ್ನು ಭೇಟಿಯಾಗಲು ಉತ್ಸುಕನಾಗಿದ್ದೇನೆ ಎಂದು ಅವರು ಬರೆದುಕೊಂಡಿದ್ದಾರೆ.

## ವೆಸ್ಟ್ ವಿಂಡೀಸ್ ವಿರುದ್ಧ ಟೆಸ್ಟ್ ಸರಣಿ : 2–0 ಅಂತರದಿಂದ ಕ್ಲೀನ್‌ಸ್ವೀಪ್ ಮಾಡಿದ ಭಾರತ

**ನವದೆಹಲಿ, ಅ. 14–** ವೆಸ್ಟ್ ಇಂಡೀಸ್ ವಿರುದ್ಧ ಎರಡನೇ ಟೆಸ್ಟ್ ಪಂದ್ಯದಲ್ಲೂ ಗೆಲುವು ಸಾಧಿಸಿರುವ ಭಾರತ ಸರಣಿಯನ್ನು 2–0 ಇಂದ ಕ್ಲೀನ್ ಸ್ವಿಪ್ ಮಾಡಿದೆ. ಶುಭಮನ್ ಗಿಲ್ ಭಾರತದ ಟೆಸ್ಟ್ ತಂಡದ ನಾಯಕರಾಗಿ ಮೊದಲ ಸರಣಿ ಜಯ ಇದಾಗಿದೆ. ಎರಡನೇ ಇನಿಂಗ್ಸ್ ನಲ್ಲಿ 121 ರನ್‌ಗಳ ಗುರಿಯನ್ನು ತಲುಪಲು ಕೇವಲ 58 ರನ್‌ಗಳ ಅಗತ್ಯವಿದ್ದಾಗ ಕನ್ನಡಿಗ ಕೆಎಲ್ ರಾಹುಲ್ 108 ಎಸೆತಗಳಲ್ಲಿ ಔಟಾಗದೆ 58 ಹಾಗೂ ಧ್ರುವ್ ಜುರೆಲ್ (ಔಟಾಗದೆ 6) 35.2 ಓವರ್‌ಗಳಲ್ಲಿ ಭರ್ಜರಿ ಗೆಲುವಿಗೆ ಕಾರಣರಾದರು.



ರಾಹುಲ್ ಆರು ಬೌಂಡರಿ ಮತ್ತು ಎರಡು ಸಿಕ್ಸರ್‌ಗಳನ್ನು ಬಾರಿಸಿದರು, ಎರಡನೇ ವಿಕೆಟ್‌ಗೆ ಸಾಯಿ ಸುದರ್ಶನ್ (39) ಅವರೊಂದಿಗೆ 79 ರನ್ ಸೇರಿಸಿದರು.ವಿಂಡೀಸ್‌ನ ಜಾನ್ ಕ್ಯಾಂಪ್‌ಬೆಲ್ (115) ಮತ್ತು ಶಾಯ್ ಹೋಪ್ (103) ಅವರ ಪ್ರತಿರೋಧ ಮತ್ತು 10ನೇ ವಿಕೆಟ್‌ಗೆ ಉತ್ತಮ ಜೊತೆಯಾಟದ ಕಾರಣದಿಂದಾಗಿ ಫಿರೋಜ್ ಷಾ ಕೋಟ್ಲಾ ಮೈದಾನ ಸ್ಪಿನ್ನರ್‌ಗಳಿಗೆ ಕಡಿಮೆ ಸಹಾಯ ಮಾಡಿದ ಹಿನ್ನೆಲೆಯಲ್ಲಿ ಪಂದ್ಯ ಐದನೆ ದಿನದವರೆಗೂ ಸಾಗುವಂತಾಯಿತು.ಎರಡು ಟೆಸ್ಟ್‌ಗಳಲ್ಲಿ, ಭಾರತೀಯ ಬೌಲರ್‌ಗಳು ಎಲ್ಲಾ 40 ಎದುರಾಳಿ ವಿಕೆಟ್‌ಗಳನ್ನು ಕಬಳಿಸಿದರು, ವೇಗಿಗಳು ಸಹಾಯಕಾರಿಯಲ್ಲದ ಮೇಲೆಗಳಲ್ಲಿ ಅದ್ಭುತ ಕೊಡುಗೆ ನೀಡಿದರು ಮತ್ತು ಕೋಟ್ಲಾದಲ್ಲಿ ಪರಿಸ್ಥಿತಿಗಳು ಶಾಂತವಾದಾಗ ಸ್ಪಿನ್ನರ್‌ಗಳು ತಾಳ್ಮೆಯನ್ನು ತೋರಿಸಿದರು.ಭಾರತೀಯ ಬ್ಯಾಟರ್‌ಗಳಿಗೆ, ಎರಡು ಪಂದ್ಯಗಳಲ್ಲಿ ಐದು ಶತಕಗಳು ಮತ್ತು ಅಗ್ರ ಆರು ಆಟಗಾರರಲ್ಲಿ 90 ರ ಸಮೀಪ ಒಬ್ಬರು ಇದ್ದರು.ಆದರೂ, ಸನ್ನಿವೇಶವನ್ನು ಗಮನಿಸಿದಾಗ, ವೆಸ್ಟ್ ಇಂಡೀಸ್‌ನ ಅಗ್ರ ಕ್ರಮಾಂಕದ ಬ್ಯಾಟ್‌ಮನ್‌ಗಳಲ್ಲಿ ಯಾರೂ ಪ್ರಸ್ತುತ ಟೆಸ್ಟ್ ಕ್ರಿಕೆಟ್‌ನಲ್ಲಿ 35 ರ ಸರಾಸರಿಯನ್ನೂ ಹೊಂದಿಲ್ಲದಿರುವುದು ವಿಪರ್ಯಾಸವೇ ಸರಿ. ಬ್ರಾಥ್‌ವೈಟ್ ನಂತರ ನಾಯಕನಾಗಿ ತಮ್ಮ ಮೊದಲ ಐದು ಟೆಸ್ಟ್‌ಗಳಲ್ಲಿ ಸೋತ ಎರಡನೇ ವೆಸ್ಟ್ ಇಂಡೀಸ್ ನಾಯಕ ಎಂಬ ಹೆಗ್ಗಳಿಕೆಗೆ ರೋಸ್ಟನ್ ಚೇಸ್ ಪಾತ್ರರಾದರು.

## ಗಡಿಯಾಚೆ ಭಯೋತ್ಪಾದನೆ: ಪಾಕ್‌ಗೆ ಭಾರತ ತರಾಟೆ

**ನವದೆಹಲಿ, ಅ.14–** ಗಡಿಯಾಚೆಗಿನ ಭಯೋತ್ಪಾದನೆ ಮತ್ತು ಮಕ್ಕಳ ಹಕ್ಕುಗಳ ಗಂಭೀರ ಉಲ್ಲಂಘನೆಗಾಗಿ ಭಾರತವು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ (ಯುಎನ್ ಜಿಎ) ಪಾಕಿಸ್ತಾನವನ್ನು ಟೀಕಿಸಿದ್ದು, ಇಸ್ಲಾಮಾಬಾದ್ ನ ನಿರೂಪಣೆಯನ್ನು ತೀಕ್ಷ್ಣವಾಗಿ ಹರಿದು ಹಾಕಿದೆ.

ಸಂಸದ ಪಿ.ಪಿ.ಚೌಧರಿ ನೇತೃತ್ವದ ಸಂಸದೀಯ ನಿಯೋಗದ ಭಾಗವಾಗಿರುವ ಬಿಜೆಪಿ ಸಂಸದ ನಿಶಿಕಾಂತ್ ದುಬೆ, ಮಕ್ಕಳ ಹಕ್ಕುಗಳ ಉತ್ತೇಜನ ಮತ್ತು ರಕ್ಷಣೆಯ ಕಾರ್ಯಸೂಚಿಯ ಬಗ್ಗೆ ಮಾತನಾಡಿ, ಜಾಗತಿಕ ಮಕ್ಕಳ ರಕ್ಷಣಾ ಕಾರ್ಯಸೂಚಿಯನ್ನು ಉಲ್ಲಂಘಿಸುವ ದೇಶಗಳಲ್ಲಿ ಪಾಕಿಸ್ತಾನ ಉಳಿದಿದೆ ಎಂದು ಆರೋಪಿಸಿದ್ದಾರೆ.ಏಪ್ರಿಲ್ 22 ರಂದು ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ನಾಗರಿಕರು ಸಾವನ್ನಪ್ಪಿದ್ದನ್ನು ಉಲ್ಲೇಖಿಸಿದ ದುಬೆ, "ಪಾಕಿಸ್ತಾನದಲ್ಲಿ ತರಬೇತಿ ಪಡೆದ ಭಯೋತ್ಪಾದಕರು ನಡೆಸಿದ ಕ್ರೂರ, ಉದ್ದೇಶಿತ ದಾಳಿಗಳನ್ನು ಅಂತಾರಾಷ್ಟ್ರೀಯ ಸಮುದಾಯವು ಮರೆತಿಲ್ಲ" ಎಂದು ಹೇಳಿದರು.

2025 ರ ಮೇನಲ್ಲಿ, ಭಾರತವು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು. ಇದು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಾದ್ಯಂತ ಒಂಬತ್ತು ಭಯೋತ್ಪಾದಕ ಅಡಗುತಾಣಗಳ ಮೇಲೆ ಸರಣಿ ದಾಳಿ ನಡೆಸಿತು ಎಂದು ಅವರು ಹೇಳಿದರು."ಪರಿಗಣಿತ ಮತ್ತು ಸಮತೋಲಿತ ಪ್ರತಿಕ್ರಿಯೆಯಲ್ಲಿ, ಭಾರತವು ಭಯೋತ್ಪಾದನೆಯ ವಿರುದ್ಧ ತನ್ನ ಜನರನ್ನು ರಕ್ಷಿಸಲು ಮತ್ತು ಅದರ ಸಂಘಟಕರು ಮತ್ತು ಅಪರಾಧಿಗಳನ್ನು ನ್ಯಾಯದ ಕಟಕಟೆಗೆ ತರಲು ತನ್ನ ಕಾನೂನುಬದ್ಧ ಹಕ್ಕನ್ನು ಚಲಾಯಿಸಿದೆ" ಎಂದು ದುಬೆ ಹೇಳಿದರು.ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ಪಾಕಿಸ್ತಾನದ ಹೇಳಿಕೆಗೆ ತೀಕ್ಷ್ಣ ಪ್ರತ್ಯುತ್ತರವಾಗಿ, ದುಬೆ ಇಸ್ಲಾಮಾಬಾದ್ ಉದ್ದೇಶಪೂರ್ವಕವಾಗಿ ನಾಗರಿಕರನ್ನು ಗುರಿಯಾಗಿಸಿಕೊಂಡಿದೆ ಎಂದು ಆರೋಪಿಸಿದರು. "ಇದಕ್ಕೆ ವ್ಯತಿರಿಕ್ತವಾಗಿ, ಪಾಕಿಸ್ತಾನವು ಉದ್ದೇಶಪೂರ್ವಕವಾಗಿ ನಮ್ಮ ಗಡಿ ಗ್ರಾಮಗಳನ್ನು ಗುರಿಯಾಗಿಸಿಕೊಂಡಿದೆ. ಇದರ ಪರಿಣಾಮವಾಗಿ ಮಕ್ಕಳು ಸೇರಿದಂತೆ ಹಲವಾರು ನಾಗರಿಕರು ಸಾವನ್ನಪ್ಪಿದ್ದಾರೆ" ಎಂದು ಅವರು ಹೇಳಿದರು. ತನ್ನ ಗಡಿಯಾಚೆಗಿನ ಪಾಕಿಸ್ತಾನದ ಕ್ರಮಗಳನ್ನು ಬಿಂಬಿಸಿದ ದುಬೆ,

ವಿಶ್ವ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಅವರ ಮಕ್ಕಳು ಮತ್ತು ಸಶಸ್ತ್ರ ಸಂಘರ್ಷ (ಸಿಎಎಸಿ) ಕುರಿತ 2025 ರ ವರದಿ ಯನ್ನು ಉಲ್ಲೇಖಿಸಿ, ಅಫ್ಘಾನಿಸ್ತಾನ ಗಡಿಯ ಸಮೀಪವಿರುವ ಪ್ರದೇಶಗಳಲ್ಲಿ ಪಾಕಿಸ್ತಾನದ ಮಿಲಿಟರಿ ನಡೆಸಿದ ಗಡಿಯಾಚೆಗಿನ ದಾಳಿಗಳು ಮತ್ತು ವೈಮಾನಿಕ ದಾಳಿಗಳಿಂದಾಗಿ ಅನೇಕ ಅಫ್ಘಾನ್ ಮಕ್ಕಳಿಗೆ ಹಾನಿಯಾಗಿದೆ ಅಥವಾ ಕೊಲ್ಲಲಾಗಿದೆ ಎಂದು ಗಮನ ಸೆಳೆದರು.

### ಕಳಪೆ ಮಟ್ಟದ ಶಾಲಾಭಿವೃದ್ಧಿ ಅಧಿಕಾರಿಗಳ ದುರ್ನಡತೆ ಖಂಡಿಸಿ ಮುಖ್ಯಮಂತ್ರಿಗಳಿಗೆ ಮನವಿ

**ಸೇಡಂ,ಅ,14–**ಕಲಬುರಗಿ ಜಿಲ್ಲೆ ಇತ್ತೀಚೆಗೆ ಶೈಕ್ಷಣಿಕವಾಗಿ ತೀರಾ ಹಿಂದೆ ಬಿದ್ದಿದೆ. ಇಲ್ಲಿನ ಮಕ್ಕಳಿಗೆ ಸರಿಯಾದ ಶಿಕ್ಷಣ ದೊರೆಯುತ್ತಿಲ್ಲ. ನಾಮಕೆ ವಾಸ್ತೆ ಎಂಬಂತೆ ಸರ್ಟಿಫಿಕೇಟಗಾಗಿ



ಮಾತ್ರ ವಿದ್ಯಾರ್ಥಿಗಳು ಅಡ್ಮಿಷನ್ ಪಡೆಯುವಂತಹ ದುಸ್ಥಿತಿಗೆ ತಲುಪಿದ್ದಾರೆ. ಕಳಪೆ ಗುಣಮಟ್ಟದ ಶಾಲಾ ಕೊಠಡಿಗಳನ್ನು ಹಿಡಿದು, ಶೂ, ಊಟ, ಬಟ್ಟೆ ಎಲ್ಲವೂ ಭ್ರಷ್ಟರ ಎಂಜಲಾಗಿ ಮಕ್ಕಳ ಹೊಟ್ಟೆಗೆ, ಬಟ್ಟೆಗೆ ತಲುಪುತ್ತಿವೆ.ಇಲ್ಲಿ ಹತ್ತಾರು ಬೃಹತ್ ಉದ್ಯಮಗಳು ಇಲ್ಲಿವೆ. ಇಲ್ಲಿನ ಸಿಮೆಂಟ್ ಕಾರ್ಖಾನೆಗಳಲ್ಲಿ ಸ್ಥಳೀಯರಿಗೆ ನೌಕರಿ ನೀಡಲ್ಲ.ಬದಲಿಗೆ ಬೇರೆ ರಾಜ್ಯದವರಿಗೆ ನೌಕರಿ ನೀಡಲಾಗುತ್ತದೆ. ಕಲಬುರಗಿ ರೈತರು ಕಂಗಾಲಾಗಿದ್ದಾರೆ ಎನ್ನುವುದಕ್ಕಿಂತ ಬರಗಾಲಕ್ಕೆ ತುತ್ತಾಗಿದ್ದಾರೆ. ಇಲ್ಲಿ ಡಿಎಪಿ ಸಹ ಕಳ್ಳ ಸಂತೆಯಲ್ಲಿ ಮಾರಾಟವಾಗುತ್ತೆ ಸರಕಾರಿ ಅಧಿಕಾರಿಗಳೇ ರೈತರ ಬಳಿ

ಲಂಚ ಪಡೆಯುತ್ತಾರೆ. ರೇಷನ ಕಾರ್ಡಗೂ ಲಂಚ ಕೊಡಬೇಕು. 100% ಬಡ್ಡೆಟನಲ್ಲಿ ಕಮ್ಮಿ ಅಂದರೂ 20 ಪರ್ಸೆಂಟ್ ಲೋಕಲ್ ಲೀಡರ್, 30 ಪರ್ಸೆಂಟ್ ಆಫೀಸರಗಳು ಹಾಗೂ ಜನಪ್ರತಿನಿಧಿಗಳು ಕಮಿಷನ್ ತೆಗೆದುಕೊಂಡಾಗ ಇನ್ನುಳಿದ 50% ನಲ್ಲಿ ತಯ್ಯಾರಾಗುವ ಯಾವ ಕಾಮಗಾರಿ ಗುಣಮಟ್ಟದಿಂದ ಕೂಡಿರಲು ಸಾಧ್ಯ. ಇಲ್ಲಿನ ರಸ್ತೆಗಳು ಕಳಪೆ ಪದಕ್ಕೆ ಉದಾಹರಣೆಯಾಗಿವೆ. ಕಟ್ಟಡಗಳು "ಇಂತಿಷ್ಟೆ ದಿನ ಬಾಳುವೆ" ಎಂಬ ಅಗ್ರಿಮೆಂಟ್ ನಡಿ ತಯ್ಯಾರಾದಂತಿವೆ. ಇವೆಲ್ಲಾ ಬಡವರ ಬಲಿ ಪಡೆಯುತ್ತಿವೆ. ಇನ್ನು ಅಕ್ರಮ ಎಂಬುದೆಲ್ಲಾ ಸಕ್ರಮವಾಗಿ, ರಾಜಾರೋಷವಾಗಿ ಯಾವ ಅಧಿಕಾರಿಗಳ, ಜನಪ್ರತಿನಿಧಿಗಳ ಹಂಗಿಲ್ಲದೆ ನಡೆಯುತ್ತದೆ. ನೀವೆ ಹೇಳಿದ್ರಿ ಇದು "ಕಲಬುರಗಿ ಮೆಡಿಕಲ್" ಹಬ್" ಎಂದು ಅನೇಕ ರೋಗಗಳ ಚಿಕಿತ್ಸೆಗೆ ಇಲ್ಲಿ ಸಲಕರಣಗಳಿಲ್ಲ. ತುರ್ತು ಸಂದರ್ಭಗಳಲ್ಲಿ ಜನ ಸೌಕರ್ಯ ಸಿಗದೆ ಸಾಯ್ತಾರೆ. ಔಷಧ ಮಾರಾಟ, ಸಾಗಾಟದಲ್ಲೂ ಸಹ ದೊಡ್ಡ ಮಟ್ಟದ ಗೋಲಮಾಲ್ ನಡೆಯುತ್ತದೆ.

ಇದೆಲ್ಲವನ್ನು ಪರಿಹರಿಸುವ, ಪ್ರಶ್ನಿಸುವ ಜವಾಬ್ದಾರಿ ಹೊತ್ತ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶ್ರೀ ಪ್ರಿಯಾಂಕ್ ಖರ್ಗೆ ಅವರು ಎಲ್ಲೂ ಸಹ ಕಲಬುರಗಿ ಸಮಸ್ಯೆಗಳ ಬಗ್ಗೆ ಮಾತನಾಡಲ್ಲ. ಇಂತಹ ಉಸ್ತುವಾರಿ ನಮಗೆ ಬೇಕಾಗಿಲ್ಲ ಜೊತೆಗೆ ನಿಮ್ಮ ಸರಕಾರದಲ್ಲೂ ಇಂತವರು ಇರುವುದು ಶೋಭೆಯಲ್ಲ. ಯೋಚಿಸಿ ಬದಲಾಯಿಸಿ ಎಂದು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರಿಗೆ ಪತ್ರಕರ್ತ ಹಾಗೂ ಸಾಮಾಜಿಕ ಕಾರ್ಯಕರ್ತ ಶಿವಕುಮಾರ (ಅಪ್ಪಾಜಿ) ನಿಡಗುಂದಾ ಅವರು (ಇ–ಮೇಲ್) ಮೂಲಕ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದ್ದಾರೆ.

ಯುವ ಮಾರ್ಗ

ಬುಧವಾರ: 15–10–2025

## ಪಾದರ್ ಡಾ.ಸತೀಶ ಪೆರ್ನಾಂಡಿಸ್‌ಗೆ ಸೇವಾ ರತ್ನ ಪ್ರಶಸ್ತಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.13–** ರಾಯಲವಾಣಿ ಕನ್ನಡ ದಿನಪತ್ರಿಕೆ ವತಿಯಿಂದ ಕೊಡಲ್ಪಡುವ ಸಾಮಾಜಿಕ ಸೇವಾ ರತ್ನ ಪ್ರಶಸ್ತಿಗೆ ವಿಮುಕ್ತಿ ಚಾರೀಟೆಬಲ್ ಟ್ರಸ್ಟ್ ನ ನಿರ್ದೇಶಕರಾದ ಪಾದರ್ ಡಾ.ಸತೀಶ ಪೆರ್ನಾಂಡಿಸ್ ಆಯ್ಕೆಯಾಗಿದ್ದಾರೆ.

ಪೋತ್ನಳ ಗ್ರಾಮದಲ್ಲಿ ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಸ್ಥಾಪಿಸಿ ರಾಯಚೂರ ಜಿಲ್ಲೆಯದ್ಯಂತ ಹಲವಾರು ಸಾಮಾಜಿಕ ಸೇವೆಗಳನ್ನು ಮಾಡುತ್ತಿರುವುದನ್ನು ಗುರುತಿಸಿ ಇವರಿಗೆ ಈ ಪ್ರಶಸ್ತಿ ನೀಡುತ್ತಿದ್ದು ಈ ಪ್ರಶಸ್ತಿಯನ್ನು ಅ.16 ರಂದು ರಾಯಚೂರು ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಅವರು ಜನ್ಮದಿನಾಚರಣೆ ಅಂಗವಾಗಿ ಈ ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ.

## ಕನ್ನಡ ಬರಿ ಭಾಷೆ ಅಲ್ಲ, ಅದು ನಮ್ಮ ಬದುಕಿನ ಮೂಲ ಬೇರು:ಕೃಷ್ಣೇಗೌಡರು




**ಬೀದರ್,ಅ.14–** ಕನ್ನಡ ಬರಿ ಭಾಷೆಗೆ ಸೀಮಿತವಾಗಿರದೆ ಅದು ನಮ್ಮ ಬದುಕಿನ ಮೂಲಬೇರಾಗಿದೆ ಎಂದು ನಿವೃತ್ತ ಪ್ರಾಚಾರ್ಯರು ಹಾಗೂ ಹಾಸ್ಯ ಕಲಾವಿದರಾದ ಪ್ರೋ.ಕೃಷ್ಣೇಗೌಡರು ತಿಳಿಸಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಕರ್ನಾಟಕ ಸಾಹಿತ್ಯ ಸಂಘದ ಅವರಣದಲ್ಲಿ ಸಾಹಿತಿಗಳೊಂದಿಗೆ ಸಂವಾದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಕನ್ನಡವು ನಮ್ಮೆ ಸರ್ವಸ್ವ. ಅದರ ಪ್ರತಿಫಲ ಎನಾಗುತ್ತೊ ಅನ್ನುವುದಕ್ಕಿಂತ ಮುಖ್ಯವಾಗಿ ಅದನ್ನು ಮುಟ್ಟಿ ಬರಬೇಕು. ಅದು ನಮಗೆ ಎಲ್ಲವನ್ನು ಕೊಟ್ಟಿದೆ. ಕನ್ನಡ ಓದು ಹಾಗೂ ಚಿಂತನೆ ನಮ್ಮ ಬುದ್ದಿ ಹಾಗೂ ಕಣ್ಣುಗಳಿಗೆ ಭಾವನೆ ದೊರಕಿಸಿದೆ. ತಾನು ವಿದೇಶಕ್ಕೂ ತೆರಳಿದರೂ ಕನ್ನಡವನ್ನು ಆಸ್ವಾದಿಸುವ ಸಂದರ್ಭ ಒದಗಿ ಬಂದಿರುವುದು ನಮ್ಮ ಪುಣ್ಯ. ಅದು ನಮ್ಮ ಭಾವಕೋಶ ಹಾಗೂ ಬುದ್ದಿಕೋಶವನ್ನು ನಿಯುಕ್ತಿಗೊಳಿಸಿದೆ ಎಂದರು.

ಎಐ ತಂತ್ರಜ್ಞಾನದಿಂದ ಮನುಷ್ಯ ಸೋಮಾರಿಯಾದ: ಇಂದು ಎಐ ತಂತ್ರಜ್ಞಾನವು ಮನುಷ್ಯನಿಗೆ ಹಲವಾರು ಮಾರ್ಗೋಪಾಯಗಳನ್ನು ಕಲ್ಪಿಸಿಕೊಡುತ್ತಿರುವ ಹಿನ್ನೆಲೆ ಆತ ಸೋಮಾರಿಯಾಗುತ್ತಿರುವುದು ದರಂತವೇ ಸರಿ. ನಮ್ಮ ಬುದ್ಧಿಮತ್ತೆಗೆ ಕೆಲಸ ಕೊಡದೇ ಎಲ್ಲವೂ ತಂತ್ರಜ್ಞಾನದ ಮೇಲೆ ನಿರ್ಭರವಾಗುತ್ತಿದ್ದೇವೆ. ಗೂಗಲ್ ಮ್ಯಾಪ್ ನಮಗೆ ಮರುಹು ಹೆಚ್ಚಿಸಿದೆ. ಅತಿಯಾದ ಮಯಬೈಲ್ ಬಳಿಕೆ ನಮ್ಮ ಮೊಬೈಲ್ ನಂಬರ್‌ಗಳನ್ನೆ ಮರೆತು ಹೋಗುವಂತೆ ಮಾಡಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಇಂದು ಸ್ವಂತದ ಐಷಾರಾಮಿ ವಾಹನಗಳಲ್ಲಿ ಓಡಾಡುತ್ತಿರುವುದರಿಂದ ಏಕಾಂಗಿತನ ಜಾಸ್ತಿಯಾಗಿ ಕಮ್ಯುನಿಕೆಶನ್ ಕಡಿಮೆಯಾಗಿದೆ. ಶಬ್ದರಹಿತ ಕಿಟಕಿಗಳು ನಿರ್ಮಿಸಿ ಹೊರಗಿನಿಂದ ಬರುವ ನಾಯಿ, ಬೆಕ್ಕು, ಪಕ್ಷಿ, ಹಾಗೂ ಇತರೆ ಪ್ರಾಣಿಗಳ ಶಬ್ದ ಕೇಳದೆ ಮೌನ ಅನುಭವಿಸುತ್ತಿರುವನು. ದೊಡ್ಡ ದೊಡ್ಡ ಬಂಗಲೆಗಳು ನಿರ್ಮಿಸಿ ಇಂದು ಸೂರ್ಯೋದಯ ಹಾಗೂ ಸೂರ್ಯಾಸ್ತವೇ ನೋಡದಂತಹ ಪರಿಸ್ಥಿತಿ ನಮ್ಮದಾಗಿದೆ ಎಂದರು.

ಸಾಹಿತಿಗಳಾದ ಪ್ರೋ.ಪ್ರಭುಶೆಟ್ಟಿ ಮೂಲಗೆ, ಶಾಂತಕುಮಾರ ಪಾಟೀಲ, ವೀರಭದ್ರಪ್ಪ ಉಪ್ಪಿನ್, ಮಲ್ಲಿಕಾರ್ಜುನ ಪ್ರಭಾ, ಜಗನ್ನಾಥ ಪಾರಾ, ದೇವಿದಾಸ ಜೋಷಿ, ಡಾ.ಸಾವಿತ್ರಿಬಾಯಿ ಹೆಬ್ಬಾಳೆ, ಶಾಂತಮ್ಮ ಬಲ್ಲೂರ್, ಅಶೋಕ ಕೋರೆ, ಶಿವಶರಣಪ್ಪ ಗಣೇಶಪುರ, ಪ್ರಕಾಶ ಕನ್ನಾಳೆ ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.ಆರಂಭದಲ್ಲಿ ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೋ.ಜಗನ್ನಾಥ ಹೆಬ್ಬಾಳೆ ಪ್ರಾಸ್ತಾವಿಕ ಮಾತನಾಡಿದರು. ರಾಷ್ಟ್ರೀಯ ಜನಪದ ಬುಡಕಟ್ಟು ಹಾಗೂ ಕಲಾಪರಿಷತ್ ಪ್ರಧಾನ ಕಾರ್ಯದರ್ಶಿ ಡಾ.ರಾಜಕುಮಾರ ಹೆಬ್ಬಾಳೆ ಸ್ವಾಗತಿಸಿ, ಪ್ರಾಧ್ಯಾಪಕಿ ಡಾ.ಸುನಿತಾ ಕೂಡ್ಲಿಕರ್ ಕಾರ್ಯಕ್ರಮ ನಿರೂಪಿಸಿದರು.

## ಅವಳಿ ಮಕ್ಕಳ ಕೊಂದು ತಾಯಿ ಆತ್ಮಹತ್ಯೆ

**ಹೈದರಾಬಾದ್,ಅ.14–** ನಗರದ ಬಾಲನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಭೀಕರ ಘಟನೆಯೊಂದು ನಡೆದಿದೆ. ವಿವಾಹಿತ ಮಹಿಳೆಯೊಬ್ಬರು ಕೌಟುಂಬಿಕ ಕಲಹದಿಂದಾಗಿ ಬೇಸತ್ತು ತನ್ನ ಇಬ್ಬರು ಅವಳಿ ಮಕ್ಕಳನ್ನು ಕೊಂದು ನಂತರ ಕಟ್ಟಡದ ಮೇಲಿನಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ತಾವು ಹೆತ್ತ ಮಕ್ಕಳಾದ ಎರಡು ವರ್ಷದ ಅವಳಿ ಮಕ್ಕಳಾದ ಚೇತನ್ ಕಾರ್ತಿಕೇಯ ಮತ್ತು ಲಾಸ್ಯತ ವಲ್ಲಿ ಅವರ ತಾಯಿ ಚಲ್ಲಾರಿ ಸಾಯಿಲಕ್ಷ್ಮಿ (27) ಆಕೆಯನ್ನು ಕೊಂದಿದ್ದಾರೆ. ನಂತರ, ಅವರು ಕಟ್ಟಡದಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸ್ಥಳೀಯರಿಂದ ಮಾಹಿತಿ ಪಡೆದ ನಂತರ, ಪೊಲೀಸರು ಸ್ಥಳಕ್ಕೆ ತಲುಪಿ ಘಟನೆಯ ಪರಿಶೀಲನೆ ನಡೆಸಿದ್ದಾರೆ.

# ಹಗಲುವೇಷ ಕಲಾವಿದ ಈರಣ್ಣ ರುದ್ರಾಕ್ಷಿಗೆ ರಾಜ್ಯೋತ್ಸವ ಪ್ರಶಸ್ತಿ ಲಭಿಸಲಿ



ಯುವ ಮಾರ್ಗ ಸುದ್ದಿ

**ದೇವದುರ್ಗ,ಅ.13–** ಐತಿಹಾಸಿಕ ಹಿನ್ನೆಲೆ ಹಾಗೂ ಪ್ರಾಚೀನ ಕಾಲದಿಂದಲೂ ಜನಮಾನಸದಲ್ಲಿ ಸದಾ ಅಚ್ಚು ಉಳಿಯುವಂತಿರುವ ಹಗಲುವೇಷ ಕಲಾ ಪ್ರದರ್ಶನ ತನ್ನದೇ ಆದ ಮಹತ್ವವನ್ನು ಪಡೆದು, ಗ್ರಾಮೀಣ ಪ್ರದೇಶದಲ್ಲಿ ಅತಿ ಹೆಚ್ಚು ಆಕರ್ಷಿತಗೊಂಡಿದೆ.

ಅಮೂಲ್ಯವಾದ ಕಲೆಯನ್ನು ನಿರಂತರವಾಗಿ ಪ್ರದರ್ಶನ ಮಾಡುವದರ ಮೂಲಕ ಈಪ್ರದೇಶದಲ್ಲಿ ರುದ್ರಾಕ್ಷಿ ಮನೆತನದ ಸದಸ್ಯರು ಕಳೆದ 3–4 ಶತಕಗಳಿಂದ ಹಗಲುವೇಷ ಕಲೆಯನ್ನು ಪೋಷಿಸುತ್ತಾ ಬಂದಿದೆ.

ಆಧುನಿಕ ತಂತ್ರಜ್ಞಾನದ ಭರಾಟೆ, ಮೊಬೈಲ್ ಬಳಕೆಯ ಗೀಳು,ಓದುವ ಸಂಖ್ಯೆ ಹಾಗೂ ಕೇಳುವ ತಾಳ್ಮೆ ಇಳಿಮುಖವಾಗುತ್ತಿರುವ ಕಾಲಘಟ್ಟದಲ್ಲಿ ಹಗಲು ವೇಷಗಾರರು,ಕಂಠ ಪಾಠದ ಮೂಲಕ ಪೌರಾಣಿಕ,ಸಾಮಾಜಿಕ ಪಾತ್ರಗಳ ಮೂಲಕ ಪ್ರಾಚೀನ ಕಾಲದ ಸಾಹಿತ್ಯವನ್ನು ಗ್ರಾಮೀಣ ಪ್ರದೇಶದಲ್ಲಿ ಉಳಿಸಿ,ಪ್ರಸಾರ ಮಾಡಿ,ಕಲೆಯನ್ನು ಜೀವಂತವಾಗಿಟ್ಟಿರುವ ಕೀರ್ತಿ ಹಗಲು ವೇಷಧಾರಿಗಳಿಗೆ ಸಲ್ಲುತ್ತದೆ.

ಪೌರಾಣಿಕ ಇತಿಹಾಸ, ಪಾತ್ರಕ್ಕೆ ತಕ್ಕ ವೇಷ–ಭೂಷಣ, ಸಂಗೀತ, ಸಾಮಾಜಿಕ, ಧಾರ್ಮಿಕ ಕ್ಷೇತ್ರಗಳನ್ನು ಒಳಗೊಂಡಂತೆ ಕಾಲ ಕಾಲಕ್ಕೆ ಅದರ ಮಹತ್ವವನ್ನು ಮೂಲತಃ ಹಗಲುವೇಷ (ಬುಡ್ಗ ಜಂಗಮ) ಸಮುದಾಯಗಳು ಅಲೆಮಾರಿಗಳಾಗಿದ್ದರೂ, ರುದ್ರಾಕ್ಷಿ ಮನೆತನ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ನಿರಂತರ ಸಂಪರ್ಕ ಇಟ್ಟುಕೊಂಡು ಅನೇಕ ಪೋಷಕರ, ಅಭಿಮಾನಿಗಳನ್ನು ಹೊಂದಿದೆ. ಗ್ರಾಮೀಣ ಜನತೆಯ ಪ್ರೀತಿ–ವಿಶ್ವಾಸಗಳನ್ನು ಗಳಿಸಿ ಜನಪ್ರೀಯತೆಯನ್ನು ಪಡೆದಿದೆ.

ಇಂತಹ ಬಹು ದೊಡ್ಡ ಮನೆತನದ ಹಿನ್ನೆಲೆಯನ್ನು ಹೊಂದಿರುವ ರುದ್ರಾಕ್ಷಿ ಮನೆತನದ ರಾಮಣ್ಣ ದಂಪತಿಗಳ ಪುತ್ರನಾಗಿರುವ ಈರಣ್ಣ ರುದ್ರಾಕ್ಷಿ ಅಪ್ರತಿಮ ಕಲಾವಿದ ಎಂದು ಗುರುತಿಸಿಕೊಂಡಿದ್ದಾನೆ.

ತಾಯಿ ಶರಣಮ್ಮ ಬರ್ರಾಕಥೆಗಳನ್ನು ಹೇಳುವಲ್ಲಿ ಪ್ರವೀಣರು. ಪರಂಪರೆಯಂತೆ ಈ ಈರಣ್ಣ ರುದ್ರಾಕ್ಷಿಯ ಪತ್ನಿ ಹನುಮಂತಿ ಕೂಡ ಬರ್ರಾಕಥೆಗಳನ್ನು ಹೇಳುವ,ಇತರರಿಗೆ ಕಲಿಸುವ ಪರಿಪಾಠ ಇಟ್ಟುಕೊಂಡಿದ್ದಾರೆ.

ಕಲಾವಿದ ಈರಣ್ಣ ರುದ್ರಾಕ್ಷಿ ಹಂಪಿ ಉತ್ಸವ, ಮೈಸೂರ ದಸರಾ, ವಿಶ್ವ ಕನ್ನಡ ಸಮ್ಮೇಳನ, ಜಾನಪದೋತ್ಸವ, ಕನ್ನಡ ರಾಜ್ಯೋತ್ಸವದಂತಹ ಕಾರ್ಯಕ್ರಮಗಳನ್ನು ನೀಡಿ ಗಮನ ಸೆಳೆದಿದ್ದಾರೆ. ಅಲ್ಲದೇ ಆಂದ್ರಪ್ರದೇಶ, ತಮಿಳುನಾಡು, ಮಹಾರಾಷ್ಟ್ರ, ಮಧ್ಯಪ್ರದೇಶ ಹಾಗೂ ದೆಹಲಿಯಲ್ಲಿ ಹಗಲುವೇಷ ಪಾತ್ರಧಾರಿಯಾಗಿ ಕಲಾ ಪ್ರದರ್ಶನ ಮಾಡಿದ್ದಾರೆ.

ಭೀಮಾಂಜನೇಯ ಯುದ್ಧ, ಮೋಹಿನಿ ಭಸ್ಮಾಸೂರ, ಜಟಾಶೂರ ವಧೆ, ಕಂಸನ ವಧೆ, ಸುಂದ–ಉಪಸುಂದ, ರಾಮಾಯಣ, ಮಹಾಭಾರತ ಪೌರಾಣಿಕ ಪ್ರದರ್ಶನ ಸೇರಿದಂತೆ ಐತಿಹಾಸಿಕ, ಸಾಮಾಜಿಕ ಹಿನ್ನೆಲೆಯುಳ್ಳ ಸಿಂಧೂರ ಲಕ್ಷ್ಮಣ, ವೀರ ಸಂಗೊಳ್ಳಿ ರಾಯಣ್ಣದಂತಹ ಪ್ರದರ್ಶನಗಳಲ್ಲಿ ಬಹುಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ.

ಭೀಮ, ರಾವಣ, ದುರ್ಯೋಧನ, ಆಂಜನೇಯ, ಶ್ರೀರಾಮ ಒಳಗೊಂಡಂತೆ ಸಿಂಧೂರ ಲಕ್ಷ್ಮಣ, ಸಂಗೊಳ್ಳಿ ರಾಯಣ್ಣದಂತಹ ಪ್ರಮುಖ ಪಾತ್ರಗಳನ್ನು ಪ್ರದರ್ಶಿಸಿರುವ ಮೂಲಕ ಪಾತ್ರಗಳಿಗೆ ಹಾಗೂ ಅದರ ಮೂಲ ತತ್ವಗಳಿಗೆ ಈರಣ್ಣ ರುದ್ರಾಕ್ಷಿ ಉತ್ತಮ ಕಲಾಪ್ರದರ್ಶನ ಮಾಡುವ ಮೂಲಕ ನ್ಯಾಯ ಒದಗಿಸಿದ್ದಾರೆ.

ಕೇವಲ ಪಾತ್ರಗಳಿಗೆ ಸೀಮಿತವಾಗದೇ, ನಿರ್ದೇಶಕನಾಗಿ, ಸಂಗೀತದ ಎಲ್ಲಾ ಪ್ರಕಾರಗಳ ವಾದ್ಯಗಳನ್ನು ನುಡಿಸುವ ಹಾಗೂ ದುರಸ್ತಿ ಕೂಡ ಮಾಡುವ ಪ್ರವೀಣತೆಯನ್ನು ಹೊಂದಿರುವ ಕಲಾವಿದ ಈರಣ್ಣ ರುದ್ರಾಕ್ಷಿ ಕಲೆ ಇತರರಿಗೆ ಮಾದರಿಯಾಗಿದೆ.

ರಾಯಚೂರು ಜಿಲ್ಲಾ ರಾಜ್ಯೋತ್ಸವ, ಕರ್ನಾಟಕ ಜಾನಪದ ಪರಿಷತ್ತು, ಸಂಗೊಳ್ಳಿ ರಾಯಣ್ಣ ಉತ್ಸವ, ಕರ್ನಾಟಕ ಜಾನಪದ ಅಕಾಡಮಿ, ಹಂಪಿ ಉತ್ಸವ, ಬೆಳವಾಡಿ ಮಲ್ಲಮ್ಮ ಉತ್ಸವ, ವಿಶ್ವ ಕನ್ನಡ ಸಮ್ಮೇಳನ ಸೇರಿದಂತೆ ಅನೇಕ ಮಠ–ಪೀಠಗಳು, ಕಲೆ, ಸಾಂಸ್ಕೃತಿಕ ಸಂಘಗಳು,ಸಾಹಿತ್ಯ ಸಮ್ಮೇಳನದ ಪ್ರಶಸ್ತಿ,ಪುರಸ್ಕಾರಗಳಿಗೆ ಈರಣ್ಣ ರುದ್ರಾಕ್ಷಿ ಪಾತ್ರರಾಗಿದ್ದಾರೆ.

ಈರಣ್ಣ ರುದ್ರಾಕ್ಷಿ ಸಮಾಜಮುಖಿಯಾಗಿ ಸೇವೆ ಸಲ್ಲಿಸುತ್ತಿದ್ದು,2007ರಲ್ಲಿ ಸ್ಥಳೀಯ ಪುರಸಭೆಯ ಸದಸ್ಯರಾಗಿ ವಾರ್ಡನಲ್ಲಿ ಕುಡಿವ ನೀರು,ಸ್ವಚ್ಛತೆ,ವಿದ್ಯುತ್ ಸಂಪರ್ಕ ಒಳಗೊಂಡಂತೆ ಮೂಲ ಸೌಕರ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ.

ಈರಣ್ಣ ರುದ್ರಾಕ್ಷಿ ಶಿಕ್ಷಣ ಪ್ರೇಮಿಯೂ ಹೌದು,ತಮ್ಮಂತೆ ಅನಕ್ಷರರು ಆಗಿರಕೂಡದು ಎಂಬ ಚಿಂತನೆಯಲ್ಲಿ ಉಪಜಾತಿಗಳ ತಾರತಮ್ಯವಿಲ್ಲದೇ,ಎಲ್ಲಾ ತಳ ಸಮುದಾಯದ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹಗಲಿರುಳು ಶ್ರಮಿಸುತ್ತಿದ್ದಾರೆ.ಇವರ ಪ್ರಯತ್ನದ ಫಲದಿಂದ ಮಾಳೆಗಡ್ಡಿಯಲ್ಲಿ ಪ್ರಾ.ಶಾಲೆ,ಅಂಗನವಾಡಿ,ಗ್ರಂಥಾಲಯ ಹೀಗೇ ಹಲವು ಅಭಿವೃದ್ಧಿ ಕೈಗೊಂಡಿದ್ದು,ಹರಿದ ಬಟ್ಟೆಯ ಗುಡಾರಗಳಲ್ಲಿಯೇ ವಾಸಿಸುವ ಕುಟುಂಗಳಿಗೆ ಸೂರು ಕಲ್ಪಿಸುವ ಉದ್ದೇಶದಿಂದ ಸರಕಾರದಿಂದ ನಿವೇಶನ ಪಡೆದಿದ್ದು,ಎಲ್ಲಾ ಬಡ ಕುಟುಂಬಗಳಿಗೆ ಮನೆ ನಿರ್ಮಿಸುವ ಗುರಿ ಹೊಂದಿದ್ದಾರೆ.

ಪ್ರಾಚೀನ ಕಲೆಯನ್ನು ಪೋಷಿಸುತ್ತಾ, ಜನಪರ ಕಾಳಜಿ ಹೊಂದಿರುವ ಕಲಾವಿದ ಈರಣ್ಣ ರುದ್ರಾಕ್ಷಿಗೆ ಸರಕಾರ, ಸಮಾಜ ಉತ್ತಮ ಪ್ರೋತ್ಸಾಹ ನೀಡಬೇಕಾಗಿದೆ. ಜೊತೆಗೆ ರಾಜ್ಯ ಸರಕಾರ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದರೆ, ಅದರ ಮೌಲ್ಯ ಇನ್ನಷ್ಟು ಹೆಚ್ಚಲಿದೆ.

# ಸಂಬಳ ವಿತರಿಸದ ಗ್ರಾ.ಪಂ:ನೇಣು ಬಿಗಿದು ಗ್ರಂಥಾಪಾಲಕಿ ಆತ್ಮಹತ್ಯೆ

**ಸೇಡಂ, ಅ.14–** ರಾಜ್ಯ ಸರ್ಕಾರವು ಗ್ರಾಮ ಪಂಚಾಯಿತಿ ವ್ಯಾಪ್ತಿ ಒಳಗೆ (ಅರಿವು ಕೇಂದ್ರ) ಗ್ರಂಥಾಲಯದ ಮೂಲಕ ಬಡ ವಿದ್ಯಾರ್ಥಿಗಳಿಗೆ ಉಚಿತವಾಗಿ ಸ್ಪರ್ಧಾತ್ಮಕ ಪುಸ್ತಕಗಳು ಲ್ಯಾಪ್ಟಾಪ್, ಕಂಪ್ಯೂಟರ್, ಹಾಗೂ ದಿನಪತ್ರಿಕೆಗಳ ಮೂಲಕ ಸಾರ್ವಜನಿಕರಿಗೂ ಅನುಕೂಲಕರ ಮಾಡಿದೆ ಅದರ ನಿರ್ವಹಣೆಗೆ ಗ್ರಂಥ ಪಾಲಕರು ನಿತ್ಯ ಕಾರ್ಯನಿರ್ವಹಿಸುತ್ತಿದ್ದಾರೆ.

ಗ್ರಂಥ ಪಾಲಕರಿಗೆ ಸರಿಯಾದ ಸಮಯಕ್ಕೆ ಸಂಬಳ ಬಾರದೆ ಇರುವುದರಿಂದ ಮಾನಸಿಕವಾಗಿ ದೈಹಿಕವಾಗಿ ಕುಗ್ಗುವಂತ ಪರಿಸ್ಥಿತಿ ನಿರ್ಮಾಣವಾಗಿದ್ದು ಕಂಡು ಬರುತ್ತಿದ್ದು, ಅದಕ್ಕೆ ಉದಾಹರಣೆ ಇಂದು ಗ್ರಂಥಾಲಯದ ಮೇಲ್ವಿಚಾರಕಿ ಒಬ್ಬರು ಸುಮಾರು 20 ವರ್ಷಗಳಿಂದ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದರು ಮಗಳ ಶಾಲಾ ಪೀಸ್ ಕಟ್ಟದೆ ಕುಟುಂಬ ನಿವಾರಣೆಯಾಗದೆ.

ಗ್ರಾಮ ಪಂಚಾಯಿತಿ ತಾಲೂಕು ಪಂಚಾಯಿತಿ ಅಧಿಕಾರಿಗಳಿಗೆ ಚುನಾಯಿತ ಪ್ರತಿನಿಧಿಗಳಿಗೆ ಸಂಬಳ ವಿತರಿಸಿ ಎಂದು ಬೇಡಿಕೊಂಡರು ವಿತರಿಸದೆ ಇರುವ ಕಾರಣ ಮನನೊಂದು ಗ್ರಂಥಾಲಯದಲ್ಲಿಯೇ ಗ್ರಂಥಪಾಲಕಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ತಾಲೂಕಿನ ಮಳಖೇಡ ಗ್ರಾಮದಲ್ಲಿ ಜರುಗಿದೆ.

ಸೋಮವಾರ ಬೆಳಗ್ಗೆ ಗ್ರಂಥಾಲಯ ರಜೆ ಇದ್ದರೂ ಕೂಡಾ ಸಂಬಳಕ್ಕಾಗಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿರು ಎಂದು ತಿಳಿದು ಬಂದಿದ್ದು ತದನಂತರ ಭಾಗ್ಯವತಿ ವಿ ಅಗ್ಗಿಮಠ ಅವರು ಅರಿವು (ಗ್ರಂಥಾಲಯಕ್ಕೆ) ಕೇಂದ್ರಕ್ಕೆ ಹೋಗಿದ್ದು ಸಂಬಳ ಇಂದು ಬರದೇ ಇರುವುದರಿಂದ ಮಾನಸಿಕವಾಗಿ ಸಂಪೂರ್ಣವಾಗಿ ಕುಗ್ಗಿ ಹೋಗಿದ ನಂತರ ಡೆತ್ ನೋಟ್ ಬರೆದಿಟ್ಟು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮೇಲ್ವಿಚಾರಕೀಯ ಗಂಡ ವಿಶ್ವೇಶ್ವರಯ್ಯ ಮಾಧ್ಯಮದವರೊಂದಿಗೆ ಅಭಿಪ್ರಾಯ ಹಂಚಿಕೊಂಡರು.



ಗ್ರಂಥಪಾಲಕಿ ಗ್ರಂಥಾಲಯದಲ್ಲಿಯೇ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗ್ರಾಮದಲ್ಲಿ ಹರಿದಾಡುತ್ತಿದ್ದಂತೆ ಸ್ಥಳೀಯ ಪೊಲೀಸ್ ಠಾಣೆಯ ಪಿಎ ಹಾಗೂ ಸಿಬ್ಬಂದಿ ವರ್ಗದವರು ಭೇಟಿ ನೀಡಿ ಸಂಬಂಧಪಟ್ಟ ಉನ್ನತ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ,ತದನಂತರ ಕುಟುಂಬಸ್ಥರು ಬಂದ ನಂತರ ಉದ್ಯೋಗ ಪರಿಹಾರ ಒದಗಿಸುವಂತೆ ಧರಣಿ ನಡೆಸಿದರು.

ಪರಿಹಾರದ ಮೊತ್ತ ಹೆಚ್ಚಳ ಮಾಡದೆ ಇರುವುದರಿಂದ ಶಿವಕುಮಾರ್ ಪಾಟೀಲ್ ತೇಲ್ಕೂರ್ ನೇತೃತ್ವದಲ್ಲಿ ರಾಜ್ಯ ಹೆದ್ದಾರಿ ತಡೆದು ಸುಮಾರು 3 ಗಂಟೆವರೆಗೆ ಧರಣಿ ಸತ್ಯಾಗ್ರಹ ನಡೆಸಿದರು ತದನಂತರ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಹೆಚ್ಚುವರಿ ಎಸ್ ಪಿ ಮಹೇಶ್ ಮೇಘಣ್ಣರವರ, ಡಿವೈಎಸ್ ಪಿ ಸಂಗಮನಾಥ ಹಿರೇಮಠ, ಸಿಪಿಐ ಮಹದೇವ್ ದಿಡ್ಡಿಮನಿ, ಪಿಎಸ್ ಐ ಸಂಗಮೇಶ್ ಅಂಗಡಿಯವರು ಪ್ರತಿಭಟನಾ ಕಾರ್ಯಗಳನ್ನು ಮನವೊಲಿಸಿ, ಪರಿಹಾರದ ಮೊತ್ತ ಹೆಚ್ಚಳಗೊಳಿಸುವುದರ ಜೊತೆಗೆ ಉದ್ಯೋಗದ ಭರವಸೆ ನೀಡಿದ ನಂತರ ರಸ್ತೆ ತಡೆ ಚಳುವಳಿ ನಿಲ್ಲಿಸಿದರು. ಈ ವೇಳೆಯಲ್ಲಿ ಗ್ರಂಥಾಲಯದ ಮೇಲ್ವಿಚಾರಕರ ಕಲಬುರ್ಗಿ ಜಿಲ್ಲಾ ಉಪಾಧ್ಯಕ್ಷರಾದ ಸಿದ್ದರಾಮಪ್ಪ ಹಾರಿ, ಜಿಲ್ಲಾ ಸಂಘದ ಕಾರ್ಯದರ್ಶಿ ಶರಣಗೌಡ ಪಾಟೀಲ್, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಡಿ.7 ರಂದು ಉಸ್ಮಾನಾಬಾದನಲ್ಲಿ ಲಿಂಗಾಯತ ಮಹಾ ರ್‍ಯಾಲಿ: ಚನ್ನಬಸವಾನಂದ ಶ್ರೀಗಳು



**ಬೀದರ, ಅ.13–**ಡಿಸೆಂಬರ್ 7 ರಂದು ಮಹಾರಾಷ್ಟ್ರದ ಉಸ್ಮಾನಾಬಾದನಲ್ಲಿ ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿ ವತಿಯಿಂದ ಲಿಂಗಾಯತ ಮಹರ್ಯಾಲಿ ಆಯೋಜಿಸಲಾಗಿದೆ ಎಂದು ಬೆಂಗಳೂರಿನ ಶ್ರೀ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ನುಡಿದರು.

ಪಟ್ಟಣದ ಸಸ್ತಾಪುರ ಬಂಗ್ಲಾ ಸಮೀಪದ ಎಂ.ಎಂ.ಬೇಗ್ ಸಭಾಮಂಟಪದಲ್ಲಿ ರಾಷ್ಟ್ರೀಯ ಬಸವ ದಳ, ಲಿಂಗಾಯತ ಧರ್ಮ ಮಹಾಸಭಾ ಹಾಗೂ ಕ್ರಾಂತಿ ಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣ ಇವರುಗಳ ಸಂಯುಕ್ತಾಶ್ರಯದಲ್ಲಿ ನಡೆಯುತ್ತಿರುವ 4ನೇ ಸ್ವಾಭಿಮಾನಿ ಕಲ್ಯಾಣ ಪರ್ವದ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ಪೂಜ್ಯ ಶ್ರೀ ಸದ್ಗುರು ಮಾತೆ ಸತ್ಯಾದೇವಿ ಬಸವ ಮಂಟಪ ಬೀದರ ಅವರು ಮಾತನಾಡಿ ಗುರು ಭಕ್ತಿಯನ್ನು ಮೈಗೂಡಿಸಿಕೊಂಡು ಶರಣರಿಗೆ ಶರಣಾರ್ಥಿ ಸಲ್ಲಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಸಂಘಟನೆ ಒಡೆಯದಂತೆ ಕಾರ್ಯಕರ್ತರು ನೋಡಿಕೊಳ್ಳಬೇಕು. ರಾಷ್ಟ್ರೀಯಬಸವ ದಳ ಇಂದಿಗೂ ಗಟ್ಟಿಯಾಗಿರಲು ಧರ್ಮಶ್ರದ್ಧೆ, ತತ್ವನಿಷ್ಠೆ ಹಾಗೂ ಲಿಂಗಾನಂದ ಸ್ವಾಮೀಜಿ ಮತ್ತು ಮಾತೆ ಮಹಾದೇವಿ ತಾಯಿ ಪರಿಶ್ರಮ ಕಾರಣವಾಗಿದೆ. ಸಂಘಟನೆಗೆ ಇನ್ನೂ ಹೆಚ್ಚಿನ ಒತ್ತುಕೊಡಿ ಎಂದರು.

ಚಿಕ್ಕಮುನವಳ್ಳಿಯ ಪೂಜ್ಯ ಶ್ರೀ ಶಿವಪುತ್ರ ಸ್ವಾಮೀಜಿ ಮಾತನಾಡಿ ದೇವನೊಬ್ಬನೇ ತಂದೆ ಮನುರೆಲ್ಲರೂ ಒಂದೇ ಎನ್ನುವ ಶರಣರ ಸಂದೇಶ ಎಲ್ಲಾ ಧರ್ಮಿಯರಿಗೂ ಅನ್ವಯಿಸುತ್ತದೆ. ಏಕದೇವೋಪಾಸಕರಾಗಿ ಬದುಕಬೇಕೆಂದು ಕರೆ ನೀಡಿದರು. ಬಸವ ಕಲ್ಯಾಣದ ಮಣ್ಣು ಹಣೆಗೆ ಹಚ್ಚಿಕೊಂಡರೆ ಬದುಕು ಸಾರ್ಥಕವಾಗುತ್ತದೆ. ಅವಿಮುಕ್ತ ಕ್ಷೇತ್ರ ಬಸವಕಲ್ಯಾಣವನ್ನು ಅಂತರಾಷ್ಟ್ರೀಯ ತಾಣವಾಗಿ ಮಾಡಲು ಎಲ್ಲರೂ ಪ್ರಯತ್ನಿಸಬೇಕೆಂದರು.

ಖಾದ್ರಿ ವೆಲ್ಫೇರ್ ಸೊಸೈಟಿ ಧಾರವಾಡದ ಉಪಾಧ್ಯಕ್ಷರಾದ ಪೂಜ್ಯ ಸೂಫಿ ಸಂತ ಪಿರೆ ತರಿಕತ್ ಅಬ್ದುಲ್ ರಜಾಕ್ ಮಾತನಾಡಿ ಚನ್ನಬಸವಾನಂದ ಸ್ವಾಮೀಜಿ ಕಾರ್ಯ ಶ್ಲಾಘನೀಯವಾಗಿದೆ. ಅವರ ಹೋರಾಟಕ್ಕೆ ಎಲ್ಲರೂ ಸಹಕರಿಸಬೇಕೆಂದು ತಿಳಿಸಿದರು.

ನಿವೃತ್ತ ಕೃಷಿ ವಿವಿ ಡೀನ್ ಡಾ.ಸುರೇಶ ಪಾಟೀಲ ಧ್ವಜಾರೋಹಣ ನೆರವೇರಿಸಿದರು. ಅಕ್ಕನಾಗಲಾಂಬಿಕಾ ಮಹಿಳಾ ಗಣದ ಶರಣೆಯರಿಂದ ಬಸವ ಪೂಜೆ ನೆರವೇರಿತು. ಕು. ವಚನ ಸಾಹಿತ್ಯ ಅವರಿಂದ ವಚನ ನೃತ್ಯ ಜರುಗಿತು. ಶಿವಕುಮಾರ ಪಾರಾ ನಿರೂಪಿಸಿದರು. ಜ್ಯೋತಿ ಕಟಾಳೆ ಸ್ವಾಗತಿಸಿದರು. ದಿಪಾಲಿ ಬಿರಾದಾರ ವಂದಿಸಿದರು. ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಬಸವಪ್ರಭು ಸ್ವಾಮೀಜಿ ಕಲ್ಯಾಣಮಹಾಮನೆ ಗುಣತೀರ್ಥವಾಡಿ, ಪೂಜ್ಯ ಮಾತೆ ಶಾಂತಾದೇವಿ, ಭಾಗ್ಯವಂತಿ ಮಾತಾಜಿ ಬೀದರ, ಪ್ರಮುಖರಾದ ಎಸ್.ದಿವಾಕರ್, ಬಸವರಾಜ ಪಾಟೀಲ ಶಿವಪುರ, ಶಶಿಕುಮಾರ ಪಾಟೀಲ, ಬಸವರಾಜ ಪಾಟೀಲ ಚಿಕ್ಕಪೇಟ, ಶಿವರಾಜ ಪಾಟೀಲ ಅತಿವಾಳ, ಶಿವಶರಣಪ್ಪ ಪಾಟೀಲ ಹಾರೂರಗೇರಿ, ಕೆ.ಶರಣಪ್ರಸಾದ ಬೆಳಗಾವಿ, ಜೈರಾಜಹತ್ತಿ, ಸೇರಿದಂತೆ ಹಲವರಿದ್ದರು.

## ಸಮೀಕ್ಷೆ ಮರು ಕಾರ್ಯಕ್ಕೆ ಶಿಕ್ಷಕರ ಹಿಂದೇಟು

**ದಾವಣಗೆರೆ,ಅ.14–** ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ ಮರುಕಾರ್ಯ ನಿರ್ವಹಿಸಲು ಶಿಕ್ಷಕರು ಹಿಂದೇಟು ಹಾಕಿ ಅಸಮಾಧಾನ ಹೊರ ಹಾಕುವ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಕೆ ಮಾಡಿದರು.ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಸಮಿತಿಯ ನೇತೃತ್ವದಲ್ಲಿನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಜಮಾಯಿಸಿದ ಶಿಕ್ಷಕರು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿಯನ್ನು ಸಲ್ಲಿಕೆ ಮಾಡಿದರು.ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ ಕಾರ್ಯ ದಿನಾಂಕ 22.09.2025 ರಿಂದ 07.10.2025ಕ್ಕೆ ಅಂತಿಮಗೊಂಡಿದ್ದರೂ ದಿನಾಂಕ 18.10.2025ರ ವರೆಗೆ ವಿಸ್ತರಿಸಲಾಗಿರುತ್ತದೆ. ಆದರೆ ಪ್ರಸ್ತುತ 0–6 ವರ್ಷದ ಮಕ್ಕಳ ಸಮೀಕ್ಷೆಯನ್ನು ಮಾಡಬೇಕೆಂದು ಗಣತಿ ಮೇಲ್ವಿಚಾರಕರು ಹೇಳುತ್ತಿರುವುದು ಸರಿಯಷ್ಟೆ, ಸದರಿ ಸಮೀಕ್ಷೆಯನ್ನು ಮಾಡುವಾಗ ಸಾರ್ವಜನಿಕರಿಂದ ಆಗಿರುವ ನಿಂದನೆ, ಅವಮಾನ ಹಲವಾರು ತೊಂದರೆಗಳ ಬಗ್ಗೆ ಮತ್ತು ಮೇಲ್ವಿಚಾರಕರು ನಿಯಮ ಮೀರಿ ಒತ್ತಡ ಹಾಕುತ್ತಿರಿವ ವಿಚಾರವಾಗಿ ಉಲ್ಲೇಖಿತ ಸಭೆಯಲ್ಲಿ ಒಕ್ಕೊರಲಿನಿಂದ ಚರ್ಚಿಸಲಾಗಿ ಮರುಸಮೀಕ್ಷೆ ಕಾರ್ಯವನ್ನು ನಿರ್ವಹಿಸದಿರಲು ತೀರ್ಮಾನಿಸಲಾಗಿದೆ ಕೂಡಲೆ ಸರ್ಕಾರ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರು.ನಾವುಗಳು ಸರ್ಕಾರದ ಆದೇಶದಂತೆ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷೆ ಕಾರ್ಯವನ್ನು ಮಾಡಿರುತ್ತೇವೆ. ಪ್ರಯುಕ್ತ 13.10.2025 ರಿಂದ ಸಮೀಕ್ಷೆ ಮರುಕಾರ್ಯನ್ನು ನಿರ್ವಹಿಸುವುದಿಲ್ಲ ಎಂಬ ಅಂಶವನ್ನು ತಮ್ಮ ಗಮನಕ್ಕೆ ತರಬಯಸುತ್ತೇವೆ. ಸಮೀಕ್ಷೆದಾರರ ಮತ್ತು ಸಂಘದ ಮನವಿಗೆ ತಾವುಗಳು ಸಕಾರಾತ್ಮಕವಾಗಿ ಸ್ಪಂದಿಸಬೇಕೆಂದು ದಾವಣಗೆರೆ ಜಿಲ್ಲೆಯ ಸಮಸ್ತ ಸರ್ಕಾರಿ ನೌಕರರ ಮನವಿ ಮೂಲಕ ಕೋರಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H